WPP-47

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೭	ಬೆಂಗಳೂರು, ಗುರುವಾರ, ಜುಲೈ ೧೨, ೨೦೧೨ (ಆಷಾಢ ೨೧, ಶಕ ವರ್ಷ ೧೯೩೪)	ಸಂಚಿಕೆ ೨೮

ಭಾಗ – ೪ಎ

ರಾಜ್ಯದ ವಿಧೇಯಕಗಳ ಮತ್ತು ಅವುಗಳ ಮೇಲೆ ಪರಿಶೀಲನಾ ಸಮಿತಿಯ ವರದಿಗಳು, ರಾಜ್ಯದ ಅಧಿನಿಯಮಗಳು ಮತ್ತು ಅಧ್ಯಾದೇಶಗಳು, ಕೇಂದ್ರದ ಮತ್ತು ರಾಜ್ಯದ ಶಾಸನಗಳ ಮೇರೆಗೆ ರಾಜ್ಯ ಸರ್ಕಾರವು ಹೊರಡಿಸಿದ ಸಾಮಾನ್ಯ ಶಾಸನಬದ್ಧ ನಿಯಮಗಳು ಮತ್ತು ರಾಜ್ಯಾಂಗದ ಮೇರೆಗೆ ರಾಜ್ಯಪಾಲರು ಮಾಡಿದ ನಿಯಮಗಳು, ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯವು ಮಾಡಿದ ನಿಯಮಗಳು

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಂಇ 43 ವಿಮಕ 2012, ಬೆಂಗಳೂರು, ದಿನಾಂಕ: 26.05.2012.

ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ 4(1)(ಬಿ) ಅಡಿಯಲ್ಲಿ ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಸಚಿವಾಲಯಕ್ಕೆ ಸಂಬಂಧಿಸಿದಂತೆ ಮಾಹಿತಿಯನ್ನು ಸಾರ್ವಜನಿಕರ ತಿಳುವಳಿಕೆಗಾಗಿ ಈ ಕೆಳಕಂಡಂತೆ ಪ್ರಕಟಿಸಲಾಗಿದೆ.

2005ರ ಮಾಹಿತಿ ಹಕ್ಕು ಅಧಿನಿಯಮದ ಕಲಂ 4(1) (ಬಿ) ರಡಿ ಕಂದಾಯ ಇಲಾಖೆಯ ಸಚಿವಾಲಯ ಹಂತದ ಸೂಚನಾ ಪಟ್ಟಿ

(i) ಕಂದಾಯ ಇಲಾಖೆಯ ಸಚಿವಾಲಯದ ಅಂಗ ರಚನೆ, ಕಾರ್ಯಗಳು ಮತ್ತು ಕರ್ತವ್ಯಗಳು

ಸಚಿವ ಸಂಪುಟದ ಹಿರಿಯ ಸದಸ್ಯರಾದ ಕಂದಾಯ ಸಚಿವರು, ಕಂದಾಯ ಇಲಾಖೆಯ ಮುಖ್ಯಸ್ಥರಾಗಿರುತ್ತಾರೆ. ಸಚಿವಾಲಯದ ಕಂದಾಯ ಇಲಾಖೆಯಲ್ಲಿ ಇಬ್ಬರು ಪ್ರಧಾನ ಕಾರ್ಯದರ್ಶಿಗಳು ಹಾಗೂ ಮತ್ತೊಬ್ಬರು ಕಾರ್ಯದರ್ಶಿಗಳಿರುತ್ತಾರೆ. ಪ್ರಧಾನ ಕಾರ್ಯದರ್ಶಿ ಇವರು ಭೂ ಮಾಪನ ಮತ್ತು ಭೂ ದಾಖಲೆ, ಭೂ ಸುಧಾರಣೆ, ಕಂದಾಯ ಸೇವೆಗಳು, ಭೂ ಸ್ವಾಧೀನ; ಭೂ ಮಂಜೂರಾತಿ ಮತ್ತು ಇಲಾಖೆಯ ಸಮಗ್ರ ಮೇಲ್ವಿಚಾರಣೆ ಕಾರ್ಯವನ್ನು ನಿರ್ವಹಿಸುತ್ತಾರೆ. ಕಂದಾಯ ಇಲಾಖೆಯಲ್ಲಿ ಇ-ಗವರ್ನೆನ್ಸ್‌ನ ಪರಿಣಾಮಕಾರಿ ನಿರ್ವಹಣೆಗಾಗಿ ಪ್ರಧಾನ ಕಾರ್ಯದರ್ಶಿ (ಭೂಮಿ ಮತ್ತು ಯುಪಿಓಆರ್) ಇವರು ಕಂದಾಯ ಇಲಾಖೆಯಲ್ಲಿ ಗಣಕೀಕರಣ ವ್ಯವಸ್ಥೆಯನ್ನು ಅಳವಡಿಸುವ ಬಗ್ಗೆ ಪರಿಶೀಲಿಸುತ್ತಾರೆ. ಕಾರ್ಯದರ್ಶಿ ಇವರು ಪ್ರಕೃತಿ ವಿಕೋಪ ನಿರ್ವಹಣೆ (Disaster Management), ನೋಂದಣಿ ಮತ್ತು ಮುದ್ರಾಂಕ, ಮುಜರಾಯಿ ವಿಷಯಗಳನ್ನು ನಿರ್ವಹಿಸುತ್ತಾರೆ.

ಕಂದಾಯ ಇಲಾಖೆಯಲ್ಲಿ ಮುಜರಾಯಿ ಖಾತೆಯನ್ನು ನಿರ್ವಹಿಸಲು ಪ್ರತ್ಯೇಕವಾಗಿ ಒಬ್ಬರು ಹಿರಿಯ ಸಚಿವರಿರುತ್ತಾರೆ. ಕಾರ್ಯದರ್ಶಿ (ವಿಪತ್ತು ನಿರ್ವಹಣೆ), ಕಂದಾಯ ಇಲಾಖೆ ಅವರು ಮುಜರಾಯಿ ಇಲಾಖೆಗೆ ಸಂಬಂಧಿಸಿದ ಮೇಲ್ವಿಚಾರಣೆ ಕಾರ್ಯವನ್ನು ನಿರ್ವಹಿಸುತ್ತಾರೆ.

ಕಂದಾಯ ಇಲಾಖೆಯ ಸಚಿವಾಲಯದ ಅಂಗರಚನೆಯನ್ನು ಈ ಮುಂದಿನ ಚಾರ್ಟ್‌ನಲ್ಲಿ ತೋರಿಸಲಾಗಿದೆ.

ಕಂದಾಯ ಇಲಾಖೆಯ ಸಂಘಟನಾ ಚಾರ್ಟ್ (ಸಚಿವಾಲಯದಲ್ಲಿ)

ಅಂಗರಚನೆ

- ಕಂದಾಯ ಸಚಿವರು
  - ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
  - ಸರ್ಕಾರದ ಪ್ರಧಾನ ಕಾರ್ಯದರ್ಶಿ (ಭೂಮಿ ಮತ್ತು ಯು.ಪಿ.ಓ.ಆರ್)
- ಮುಜರಾಯಿ ಸಚಿವರು
  - ಸರ್ಕಾರದ ಕಾರ್ಯದರ್ಶಿ (ವಿಪತ್ತು ನಿರ್ವಹಣೆ)

1. ಜಂ.ಕಾ ಭೂ.ಮಂ/ಭೂ.ಸು/ಭೂ.ಸು.ಕೋ/ಭೂ.ಕಂ/ಮುಜರಾಯಿ → ಅ.ಕಾ ಭೂ.ಮಂ-1,2 → ಅ.ಕಾ ಭೂ.ಸು → ಅ.ಕಾ ಭೂ.ಸು.ಕೋ → ಅ.ಕಾ ಭೂ.ಕಂದಾಯ
2. ಉ.ಕಾ ನೋಂ.ಮು/ಸೇವೆಗಳು/ಕೆ.ಎ.ಟಿ/ವಿ.ಕೋ/ಸಮನ್ವಯ → ಅ.ಕಾ ಸೇವೆಗಳು-1,2,3 → ಅ.ಕಾ ಕೆ.ಎ.ಟಿ → ಅ.ಕಾ ವಿಶೇಷ ಕೋಶ → ಅ.ಕಾ ಭೂ.ಮಂ-3 ಸಮನ್ವಯ ಸ್ವಿ.ಮ.ರ
3. ಉ.ಕಾ ಭೂ.ಮ&ಭೂ.ದಾ ಪುನರ್ವಸತಿ → ಅ.ಕಾ ಭೂ.ಮಾ&ಭೂ.ದಾ
4. ಉ.ಕಾ ಭೂ ಸ್ವಾಧೀನ → ಅ.ಕಾ ಭೂ.ಸ್ವಾ 1,3 → ಅ.ಕಾ ಪುನರ್ವಸತಿ ಭೂ.ಸ್ವಾ 2
   - ನಿರ್ದೇಶಕರು ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯ
   - ಪೀಠಾಧಿಕಾರಿಗಳು ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯ
5. ಕಾ.ಕೋ ಮುಖ್ಯಸ್ಥರು → ಅ.ಕಾ ಕಾ.ಕೋ
6. ನಿರ್ದೇಶಕರು ಹಾಗೂ ಪದನಿಮಿತ್ತ ಉ.ಕಾ → ಅ.ಕಾ ಭೂಮಿ & ಯುಪಿಓಆರ್
7. ಜಂ.ಕಾ ಮುಜರಾಯಿ → ಅ.ಕಾ ಮುಜರಾಯಿ
8. ಉ.ಕಾ ನೋಂ.ಮು → ಅ.ಕಾ ನೋಂ.ಮು
9. ಉ.ಕಾ ವಿ.ನಿ → ಅ.ಕಾ ವಿ.ನಿ

ಕಂದಾಯ ಇಲಾಖೆಯು ತನ್ನ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ಕ್ಷೇತ್ರ ಇಲಾಖೆ: ನಿಗಮ:ಸಂಸ್ಥೆಗಳಿಗೆ ಸಂಬಂಧಿಸಿದಂತೆ ಆಡಳಿತಾತ್ಮಕ, ಆರ್ಥಿಕ ಹಾಗೂ ಸೇವೆಗಳಿಗೆ ಸಂಬಂಧಿಸಿದ ಕೆಲಸ ಕಾರ್ಯಗಳನ್ನು ನಿರ್ವಹಿಸಲಾಗುತ್ತಿದೆ:

ಕ್ರ ಸಂ	ಕಂದಾಯ ಇಲಾಖೆಯ ಅಧೀನಕ್ಕೊಳಪಡುವ ಅಧೀನ ಇಲಾಖೆಗಳು: ಶಾಸನ ಬದ್ಧ ಸ್ವಾಯತ್ತ ಸಂಸ್ಥೆಗಳು
1	ಪ್ರಾದೇಶಿಕ ಆಯುಕ್ತರು, ಬೆಂಗಳೂರು
2	ಪ್ರಾದೇಶಿಕ ಆಯುಕ್ತರು, ಮೈಸೂರು
3	ಪ್ರಾದೇಶಿಕ ಆಯುಕ್ತರು, ಗುಲ್ಬರ್ಗಾ
4	ಪ್ರಾದೇಶಿಕ ಆಯುಕ್ತರು, ಬೆಳಗಾವಿ
5	ನೋಂದಣಿ ಮಹಾ ಪರಿವೀಕ್ಷಕರು ಮತ್ತು ಮುದ್ರಾಂಕ ಆಯುಕ್ತರು
6	ಆಯುಕ್ತರು, ಭೂಮಾಪನ ಮತ್ತು ಭೂದಾಖಲೆಗಳ ಇಲಾಖೆ
7	ಅಧ್ಯಕ್ಷರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ
8	ಆಯುಕ್ತರು, ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳು
9	ಆಯುಕ್ತರು, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರ
10	ಆಯುಕ್ತರು, ಕೂಡಲಸಂಗಮ ಅಭಿವೃದ್ಧಿ ಮಂಡಳಿ
11	ಆಯುಕ್ತರು, ಬಸವಕಲ್ಯಾಣ ಅಭಿವೃದ್ಧಿ ಮಂಡಳಿ
12	ಆಯುಕ್ತರು, ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ
13	ಆಯುಕ್ತರು, ಸನ್ನತಿ ಅಭಿವೃದ್ಧಿ ಮಂಡಳಿ
14	ಆಯುಕ್ತರು, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ
15	ಆಯುಕ್ತರು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ
16	ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು
17	ನಿರ್ದೇಶಕರು, ದೇವಿಕಾ ರಾಣಿ ಮತ್ತು ದೇವಿಕಾ ರಾಣಿ ರೋರಿಕ್ ಎಸ್ಟೇಟ್ ಮಂಡಳಿ

ಕಂದಾಯ ಇಲಾಖೆಯು ನಿರ್ವಹಿಸುವ ಪ್ರಮುಖ ಕಾರ್ಯಗಳು ಕೆಳಕಂಡಂತಿವೆ:

1. ರಾಜ್ಯದಲ್ಲಿ ಭೂದಾಖಲೆಗಳ ನಿರ್ವಹಣೆ ಮತ್ತು ಎಲ್ಲಾ ಜಮೀನುಗಳ ಭೂಮಾಪನ
2. ಭೂ ಕಂದಾಯ, ನೀರು ತೆರಿಗೆ, ಮತ್ತಿತರ ಸರ್ಕಾರಿ ಬಾಕಿ, ಉಪಕರ ಮತ್ತು ತೆರಿಗೆಗಳ ವಸೂಲಾತಿ ಗ್ರಾಮತಾಣ, ಗೋಮಾಳ, ಗುಂಡುತೋಪು, ಕೆರೆ ಅಂಗಳ, ಉಪವನಗಳು ಇತ್ಯಾದಿ ಸಾಮುದಾಯಿಕ ಜಮೀನುಗಳೂ ಸೇರಿದಂತೆ ಎಲ್ಲಾ ಸರ್ಕಾರಿ ಜಮೀನುಗಳ ನಿರ್ವಹಣೆ ಮತ್ತು ಪರಿಸರ ಸಂರಕ್ಷಣೆ
3. ಭೂ ಮಂಜೂರಾತಿ
4. ಭೂ ಸುಧಾರಣೆ ಮತ್ತು ಗೇಣಿದಾರಿಕೆಯ ನಿರ್ಬಂಧನೆಗಳ ನಿರ್ವಹಣೆ
5. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಜಮೀನು ರಕ್ಷಣೆ
6. ಭೂ ಪರಿವರ್ತನೆ
7. ಸ್ಥಿರಾಸ್ತಿಗಳ ಮೇಲಿನ ಬಾಡಿಗೆ ನಿಯಂತ್ರಣ
8. ಸಾರ್ವಜನಿಕ ಉದ್ದೇಶಕ್ಕಾಗಿ ಖಾಸಗಿ ಆಸ್ತಿಗಳನ್ನು ಸ್ವಾಧೀನಪಡಿಸುವುದು
9. ಸ್ಥಿರಾಸ್ತಿಗಳ ವ್ಯವಹಾರ, ಉಯಿಲು, ಒಪ್ಪಂದ ಇತ್ಯಾದಿಗಳ ನೋಂದಣಿ ಮತ್ತು ಮುದ್ರಾಂಕ ಶುಲ್ಕ ವಸೂಲಾತಿ
10. ಹಿಂದೂ ಧಾರ್ಮಿಕ ಸ್ಥಳಗಳ ನಿಯಂತ್ರಣ ಮತ್ತು ಅಭಿವೃದ್ಧಿ

(ii) ಕಂದಾಯ ಇಲಾಖೆಯ ಸಚಿವಾಲಯದ ಅಧಿಕಾರಿಗಳು ಮತ್ತು ನೌಕರರ ವಿವರ ಹಾಗೂ ಕರ್ತವ್ಯಗಳು

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
1.	ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ ಕೊಠಡಿ ಸಂ:505, 5ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕಂದಾಯ ಇಲಾಖೆಯ ಅಧಿಕೃತ ಮುಖ್ಯಸ್ಥರಾಗಿದ್ದು, ಇಲಾಖಾ ಸಚಿವರ ನಿರ್ದೇಶನಗಳನ್ನು ಕಾಯ್ದೆ ಮತ್ತು ನಿಯಮಗಳ ಚೌಕಟ್ಟಿನಲ್ಲಿ ಹಾಗೂ ಕರ್ನಾಟಕ ಸರ್ಕಾರಿ (ವ್ಯವಹಾರ ನಿರ್ವಹಣೆ) ನಿಯಮಗಳಿಗೆ ಒಳಪಟ್ಟು ಕಂದಾಯ ಇಲಾಖೆಯ ವಿಷಯಗಳನ್ನು ವಿಲೇವಾರಿ ಮಾಡುವ ಮತ್ತು ಎಲ್ಲಾ ವ್ಯವಹಾರದ ಜವಾಬ್ದಾರಿ ಹೊಂದಿರುತ್ತಾರೆ. ಹಾಗೂ ಇವರು ಭೂ ಮಾಪನ ಮತ್ತು ಭೂ ದಾಖಲೆ, ಭೂ ಸುಧಾರಣೆ, ಕಂದಾಯ ಸೇವೆಗಳು, ಭೂ ಸ್ವಾಧೀನ; ಭೂ ಮಂಜೂರಾತಿ ಮತ್ತು ಇಲಾಖೆಯ ಸಮಗ್ರ ಮೇಲ್ವಿಚಾರಣೆ ಕಾರ್ಯವನ್ನು ನಿರ್ವಹಿಸುತ್ತಾರೆ. ಮತ್ತು ಇಲಾಖೆಯ ಅಧೀನ ಸಿಬ್ಬಂದಿಯ ಮೇಲ್ವಿಚಾರಣೆ ಮತ್ತು ನಿಯಂತ್ರಣದ ಅಧಿಕಾರವನ್ನು ಹೊಂದಿರುವರು. ಇಲಾಖೆಗೆ ಸಂಬಂಧಿಸಿದ ನೀತಿ ನಿರ್ಧಾರಗಳನ್ನು ತೆಗೆದುಕೊಳ್ಳಲು ಇಲಾಖಾ ಸಚಿವರಿಗೆ ಸಲಹೆ ಸಹಕಾರ ನೀಡುವರು.
2.	ಸರ್ಕಾರದ ಕಾರ್ಯದರ್ಶಿ (ಭೂಮಿ ಮತ್ತು ಯುಪಿಒಆರ್) ಕೆ.ಆರ್.ವೃತ್ತ, ಬೆಂಗಳೂರು–560 001	ಭೂಮಿ ಯೋಜನೆ ಮತ್ತು ನಗರ ಆಸ್ತಿ ಮಾಲೀಕತ್ವದ ಹಕ್ಕು (Urban Property Ownership Right) (UPOR) ಯೋಜನೆಯ ಪರಿಣಾಮಕಾರಿ ನಿರ್ವಹಣೆಗೆ ಸಂಬಂಧಿಸಿದ ವಿಷಯಗಳನ್ನು ನಿರ್ವಹಿಸುವರು ಹಾಗೂ ಸದರಿ ವಿಷಯಗಳಲ್ಲಿ ನೀತಿ ನಿರ್ಧಾರ ತೆಗೆದುಕೊಳ್ಳಲು ಇಲಾಖಾ ಸಚಿವರಿಗೆ ಸಲಹೆ ಸಹಕಾರ ನೀಡುವರು.
3.	ಸರ್ಕಾರದ ಕಾರ್ಯದರ್ಶಿ (ವಿಪತ್ತು ನಿರ್ವಹಣೆ) ಕೊಠಡಿ ಸಂ:547, 5ನೇ ಮಹಡಿ, 2ನೇ ಹಂತ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕಂದಾಯ ಇಲಾಖೆಯಲ್ಲಿ ಅಧಿಕಾರ ಪ್ರತ್ಯಾಯೋಜನೆ ಪ್ರಕಾರ ವಿಪತ್ತು ನಿರ್ವಹಣೆ, ನೋಂದಣಿ ಮತ್ತು ಮುದ್ರಾಂಕ, ಮುಜರಾಯಿ ಮತ್ತು ಭೂ ಮಂಜೂರಾತಿ ವಿಷಯಗಳ ಬಗ್ಗೆ ಇಲಾಖಾ ಸಚಿವರುಗಳ ನಿರ್ದೇಶನಗಳನ್ನು ಕಾನೂನು ಚೌಕಟ್ಟಿನಲ್ಲಿ ಹಾಗೂ ಕರ್ನಾಟಕ ಸರ್ಕಾರಿ (ವ್ಯವಹಾರ ನಿರ್ವಹಣೆ) ನಿಯಮಗಳಿಗೆ ಒಳಪಟ್ಟು ವಿಲೇವಾರಿ ಮಾಡುವ ಜವಾಬ್ದಾರಿ ಹೊಂದಿರುವರು ಹಾಗೂ ಸದರಿ ವಿಷಯಗಳಿಗೆ ಸಂಬಂಧಿಸಿದ ನೀತಿ ನಿರ್ಧಾರಗಳನ್ನು ತೆಗೆದುಕೊಳ್ಳಲು ಇಲಾಖಾ ಸಚಿವರುಗಳಿಗೆ ಸಲಹೆ ಸಹಕಾರಗಳನ್ನು ನೀಡುವರು.
4.	ಸರ್ಕಾರದ ಜಂಟಿ ಕಾರ್ಯದರ್ಶಿ (ಭೂ ಸುಧಾರಣೆ, ಭೂ ಸುಧಾರಣಾ ಕೋಶ, ಭೂ ಕಂದಾಯ, ಮುಜರಾಯಿ ಮತ್ತು ಭೂ ಮಂಜೂರಾತಿ) 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–560 001	ಕಂದಾಯ ಇಲಾಖೆಯ ಭೂ ಮಂಜೂರಾತಿ, ಮುಜರಾಯಿ, ಭೂ ಸುಧಾರಣೆ ಮತ್ತು ಭೂ ಸುಧಾರಣಾ ಕೋಶ ಶಾಖೆಗಳಲ್ಲಿ ನಿರ್ವಹಿಸುವ ವಿಷಯಗಳ ಮೇಲ್ವಿಚಾರಣೆ ಹಾಗೂ ಸದರಿ ಶಾಖೆಗಳ ಅಧೀನ ಸಿಬ್ಬಂದಿ ಮೇಲೆ ನಿಯಂತ್ರಣ ಹೊಂದಿರುವರು.
5.	ಸರ್ಕಾರದ ಅಧೀನ ಕಾರ್ಯದರ್ಶಿ, (ಭೂ ಸುಧಾರಣೆ) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಭೂ ಸುಧಾರಣಾ ಶಾಖೆಯಲ್ಲಿ ನಿರ್ವಹಿಸುವ ವಿಷಯಗಳ ಮೇಲ್ವಿಚಾರಣೆ ಹಾಗೂ ಅಧೀನ ಸಿಬ್ಬಂದಿಯ ನಿಯಂತ್ರಣ ಹೊಂದಿರುವರು
6.	ಶಾಖಾಧಿಕಾರಿ ಭೂಸುಧಾರಣೆ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–560 001	ಕರ್ನಾಟಕ ಭೂ ಸುಧಾರಣೆ ಕಾಯ್ದೆ ಮತ್ತು ಅದರಡಿಯ ನಿಯಮಗಳು, ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿ ಬರುವ ನಿಯಮಗಳಿಗೆ ಸಂಬಂಧಿಸಿದ ವಿಷಯಗಳನ್ನು ನಿರ್ವಹಿಸುವುದು.

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
	ಅ) ಹಿರಿಯ ಸಹಾಯಕರು ಆ) ಸಹಾಯಕರು-1 ಇ) ಸಹಾಯಕರು-2 ಈ) ಕಿರಿಯ ಸಹಾಯಕರು ಉ) ದಲಾಯತ್	ಅ) ಹಿರಿಯ ಸಹಾಯಕರು: 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ, ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿ ಬರುವ ಕಾಯ್ದೆ ಮತ್ತು ನಿಯಮಗಳಿಗೆ ತಿದ್ದುಪಡಿ. 2. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109ರಡಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಖರೀದಿಸಲು ಅನುಮತಿ ನೀಡುವ ವಿಚಾರ (ಬೆಂಗಳೂರು ವಿಭಾಗಕ್ಕೆ ಸಂಬಂಧಿಸಿದಂತೆ). 3. ಕರ್ನಾಟಕ ಭೂಸುಧಾರಣೆ ಕಾಯ್ದೆ ಕಲಂ 48ರಂತೆ ಪಿ.ಟಿ.ಸಿ.ಎಲ್ ಕಾಯ್ದೆ ಅಡಿ ಬರುವ ಜಮೀನು ಪರಭಾರೆ ವಿಷಯ. 4. ವಿಧಾನ ಸಭೆ, ವಿಧಾನ ಪರಿಷತ್ ಪ್ರಶ್ನೆಗಳು, ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳು (ಬೆಂಗಳೂರು ವಿಭಾಗಕ್ಕೆ ಸಂಬಂಧಿಸಿದಂತೆ). 5. ಕಾಯ್ದೆ ಮತ್ತು ನಿಯಮದಡಿ ಬರುವ ರಿಟ್ ಅರ್ಜಿಗಳು (ಬೆಂಗಳೂರು ವಿಭಾಗ). 6. ಇತರೇ (ಮಿಸಲೇನಿಯಸ್) ವಿಷಯಗಳು. ಆ) ಸಹಾಯಕರು-1: 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109ರಡಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಖರೀದಿಸಲು ಅನುಮತಿ ನೀಡುವ ವಿಚಾರ (ಬೆಳಗಾವಿ ಮತ್ತು ಗುಲ್ಬರ್ಗಾ ವಿಭಾಗಕ್ಕೆ ಸಂಬಂಧಿಸಿದಂತೆ). 2. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 61ರಂತೆ ಮತ್ತು ಪಿ.ಟಿ.ಸಿ.ಎಲ್ ಕಾಯ್ದೆ ಕಲಂ 4(2)ರ ಅಡಿ ಬರುವ ಜಮೀನು ಪರಭಾರೆ ವಿಷಯ (ಬೆಳಗಾವಿ ಮತ್ತು ಗುಲ್ಬರ್ಗಾ ವಿಭಾಗಕ್ಕೆ ಸಂಬಂಧಿಸಿದಂತೆ). 3. ವಿಧಾನ ಸಭೆ, ವಿಧಾನ ಪರಿಷತ್‌ನ ಪ್ರಶ್ನೆಗಳು, ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳು (ಬೆಳಗಾವಿ ಮತ್ತು ಗುಲ್ಬರ್ಗಾ ವಿಭಾಗಕ್ಕೆ ಸಂಬಂಧಿಸಿದಂತೆ). 4. ಕಾಯ್ದೆ ಮತ್ತು ನಿಯಮದಡಿ ಬರುವ ರಿಟ್ ಅರ್ಜಿಗಳು (ಬೆಳಗಾವಿ ಮತ್ತು ಗುಲ್ಬರ್ಗಾ ವಿಭಾಗ). ಇ) ಸಹಾಯಕರು-2 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109ರಡಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಖರೀದಿಸಲು ಅನುಮತಿ ನೀಡುವ ವಿಚಾರ (ಮೈಸೂರು ವಿಭಾಗಕ್ಕೆ ಸಂಬಂಧಿಸಿದಂತೆ). 2. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 61ರಂತೆ ಮತ್ತು ಪಿ.ಟಿ.ಸಿ.ಎಲ್ ಕಾಯ್ದೆ ಕಲಂ 4(2)ರ ಅಡಿ ಬರುವ ಜಮೀನು ಪರಭಾರೆ ವಿಷಯ (ಮೈಸೂರು ವಿಭಾಗಕ್ಕೆ ಸಂಬಂಧಿಸಿದಂತೆ). 3. ವಿಧಾನ ಸಭೆ, ವಿಧಾನ ಪರಿಷತ್‌ನ ಪ್ರಶ್ನೆಗಳು, ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳು (ಮೈಸೂರು ವಿಭಾಗ). 4. ಕಾಯ್ದೆ ಮತ್ತು ನಿಯಮದಡಿ ಬರುವ ರಿಟ್ ಅರ್ಜಿಗಳು (ಮೈಸೂರು ವಿಭಾಗ).

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		5. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 48ರಡಿ ಭೂ ನ್ಯಾಯ ಮಂಡಳಿಯ ಸದಸ್ಯರ ನಾಮ ನಿರ್ದೇಶನ ಇತ್ಯಾದಿ ವಿಷಯ. 6. ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿ ಬರುವ ನೀತಿ ವಿಷಯಗಳು. ಈ) ಸಹಾಯಕರು–3 (ಸಾಂಖ್ಯಿಕ ನಿರೀಕ್ಷಕರು): 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಮತ್ತು ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿಯಲ್ಲಿ ಬರುವ ನಿಯತಕಾಲಿಕ ಅಂಕಿ ಅಂಶಗಳ ಕ್ರೂಢೀಕೃತ ಮಾಹಿತಿ. 2. ಅಂಕಿ–ಅಂಶಗಳಿಗೆ ಸಂಬಂಧಪಟ್ಟ ವಿಧಾನ ಸಭೆ, ವಿಧಾನ ಪರಿಷತ್‌ನ ಪ್ರಶ್ನೆಗಳು ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳ ವಿಷಯಕ್ಕೆ ಸಂಬಂಧಿಸಿದಂತೆ. 3. ಆಯವ್ಯಯಕ್ಕೆ ಸಂಬಂಧಿಸಿದ ಮಾಹಿತಿ, ರಾಜ್ಯಪಾಲರ ಭಾಷಣಕ್ಕೆ ಮಾಹಿತಿ, ಕೇಂದ್ರ ಸರ್ಕಾರಕ್ಕೆ ಮಾಹಿತಿ ಒದಗಿಸುವ ವಿಚಾರ. 4. ತಾಲ್ಲೂಕು ಭೂ ನ್ಯಾಯ ಮಂಡಳಿಗಳ ಪ್ರಕರಣಗಳ ವಿಲೇ ವರದಿ ಕ್ರೂಢೀಕರಣ. 5. ಗೇಣಿ ಅರ್ಜಿಗಳ ಮತ್ತು ಹೆಚ್ಚುವರಿ ಭೂಮಿ ಹಂಚಿಕೆ ಪ್ರಗತಿ ವರದಿಗಳು. ಉ) ಕಿರಿಯ ಸಹಾಯಕರು: ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು. ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
7.	ಸರ್ಕಾರದ ಅಧೀನ ಕಾರ್ಯದರ್ಶಿ, (ಭೂ ಸುಧಾರಣೆ ಕೋಶ ಮತ್ತು ಭೂ ಕಂದಾಯ) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಭೂ ನ್ಯಾಯ ಮಂಡಳಿಗಳ ತೀರ್ಮಾನಗಳನ್ನು ಪ್ರಶ್ನಿಸಿ ಸಲ್ಲಿಸುವ ರಿಟ್ ಅರ್ಜಿ/ ರಿಟ್‌ಅಪೀಲು/ ಎಸ್.ಎಲ್.ಪಿ./ ಅಧೀನ ನ್ಯಾಯಾಲಯಗಳ ಪ್ರಕರಣಗಳ ಕುರಿತು ಕ್ರಮವಹಿಸುವುದು. ಜಿಲ್ಲಾ ಕಛೇರಿ ಸಂಕೀರ್ಣ, ಮಿನಿ ವಿಧಾನಸೌಧಗಳ ನಿರ್ಮಾಣ ಕುರಿತು ಆಡಳಿತಾತ್ಮಕ ಅನುಮೋದನೆ, ಅನುದಾನ ಮಂಜೂರಾತಿ, ವಾಹನ ಖರೀದಿ ಮಂಜೂರಾತಿ, ವೇತನೇತರ (ಯೋಜನೇತರ) ಅನುದಾನ ಬಿಡುಗಡೆ ಹಾಗೂ ಭೂ ಕಂದಾಯ ವಿಷಯಗಳ ನಿರ್ವಹಣೆ.
8.	ಶಾಖಾಧಿಕಾರಿ (ಭೂ ಸುಧಾರಣಾ ಕೋಶ) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2	ಭೂ ನ್ಯಾಯ ಮಂಡಳಿಗಳ ತೀರ್ಮಾನಗಳನ್ನು ಪ್ರಶ್ನಿಸಿ ಸಲ್ಲಿಸುವ ರಿಟ್ ಅರ್ಜಿ/ ರಿಟ್‌ಅಪೀಲು/ ಎಸ್.ಎಲ್.ಪಿ./ ಅಧೀನ ನ್ಯಾಯಾಲಯ ಪ್ರಕರಣಗಳ ಕುರಿತು ಕ್ರಮವಹಿಸುವುದು. ಜಿಲ್ಲಾ ಕಛೇರಿ ಸಂಕೀರ್ಣ, ಮಿನಿ ವಿಧಾನಸೌಧಗಳ ನಿರ್ಮಾಣ ಕುರಿತು ಆಡಳಿತಾತ್ಮಕ ಅನುಮೋದನೆ, ಅನುದಾನ ಮಂಜೂರಾತಿ, ವಾಹನ ಖರೀದಿ ಮಂಜೂರಾತಿ, ವೇತನೇತರ (ಯೋಜನೇತರ) ಅನುದಾನ ಬಿಡುಗಡೆ. ಅ) ಹಿರಿಯ ಸಹಾಯಕರು: ಕಂದಾಯ ಇಲಾಖೆಯ ಜಿಲ್ಲಾ ಕಛೇರಿ ಸಂಕೀರ್ಣ, ಮಿನಿವಿಧಾನಸೌಧ ನಿರ್ಮಾಣ, ಭೂ ನ್ಯಾಯ ಮಂಡಳಿಗಳ ತೀರ್ಮಾನಗಳನ್ನು ಪ್ರಶ್ನಿಸಿ ರಿಟ್‌ಅರ್ಜಿ/ ಅಪೀಲು ಮತ್ತು ಎಸ್.ಎಲ್.ಪಿ.ಗಳ ಕುರಿತ ವಿಷಯಗಳು

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
	ಈ) ಕಿರಿಯ ಸಹಾಯಕರು ಉ) ದಲಾಯತ್	ಆ) ಸಹಾಯಕರು–1: ಕಂದಾಯ ಇಲಾಖೆಯ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದ ವಿಷಯ, ವಾಹನ ಖರೀದಿ ಮಂಜೂರಾತಿ, ನ್ಯಾಯಾಲಯ ವಿಷಯಗಳು, ಕಾರ್ಯನೀತಿ ವಿಷಯ. ಇ) ಸಹಾಯಕರು–2 ಕಂದಾಯ ಇಲಾಖೆಯ ವೇತನೇತರ ಅನುದಾನ ಬಿಡುಗಡೆಗೆ ಸಂಬಂಧಿಸಿದ ವಿಷಯಗಳು. ಈ) ಕಿರಿಯ ಸಹಾಯಕರು: ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
9.	ಶಾಖಾಧಿಕಾರಿ ಭೂ ಕಂದಾಯ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಭೂ ಕಂದಾಯ ಕಾಯ್ದೆ ಮತ್ತು ಅದರಡಿಯ ನಿಯಮಗಳ ವಿಷಯಗಳು, ಭೂಕಂದಾಯ ಮನ್ನಾ, ಖಾತಾ ಬದಲಾವಣೆ ಮತ್ತು ದೂರುಗಳು, ಮ್ಯುಟೇಷನ್ ವಿವಾದ, ಡಿ.ಸಿ.ಬಿ., ಬ್ಯಾಂಕ್ ಸಾಲ ವಸೂಲಿ, ಎಸ್.ಎಲ್.ಬಿ.ಸಿ. ವಿಷಯಗಳು, ಸರ್ಕಾರಿ ಬಾಕಿಯನ್ನು ಭೂ ಕಂದಾಯ ಬಾಕಿಯೆಂದು ಪರಿಗಣಿಸಿ ವಸೂಲಿ ಮಾಡುವುದು. ಅ) ಹಿರಿಯ ಸಹಾಯಕರು: ಮೈಸೂರು ಮತ್ತು ಗುಲ್ಬರ್ಗಾ ವಿಭಾಗಗಳಿಗೆ ಸಂಬಂಧಿಸಿದ ಈ ಕೆಳಕಾಣಿಸಿದ ವಿಷಯಗಳು 1 ಎಲ್ಲಾ ವಿಭಾಗಗಳ ಭೂ ಕಂದಾಯ ಮನ್ನಾ ಮಾಡುವ ಪ್ರಸ್ತಾವನೆಗಳನ್ನು ಪರಿಶೀಲಿಸುವುದು 2 ಖಾತಾ ಬದಲಾವಣೆಯ ಬಗ್ಗೆ ಬಂದ ದೂರುಗಳ ಬಗ್ಗೆ ಕ್ರಮ ಕೈಗೊಳ್ಳುವುದು. ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಪರಿಶೀಲಿಸುವುದು. 3 ಖಾತೆ:ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ನ್ಯಾಯಾಲಯ ಪ್ರಕರಣಗಳು. 4 ಖಾತೆ:ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ವಿಧಾನ ಸಭೆ/ ಪರಿಷತ್ ಪ್ರಶ್ನೆಗಳು,ಅರ್ಜಿ ಸಮಿತಿ, ಭರವಸೆ ಇತ್ಯಾದಿ ವಿಷಯಗಳು. 5 ಮೇಲಿನ ವಿಷಯಗಳಿಗೆ ಸಂಬಂಧಿಸಿದ ಮಾಹಿತಿ ಹಕ್ಕು ಅಧಿನಿಯಮದ ಅಡಿಯಲ್ಲಿ ಸಲ್ಲಿಸಿದ ಅರ್ಜಿಗಳು. 6 ಮೇಲ್ಕಂಡ ವಿಷಯಗಳಿಗೆ ಸಂಬಂಧಿಸಿದ ಭೂ ಕಂದಾಯ ಕಾಯಿದೆಗೆ ತಿದ್ದುಪಡಿ ಮಾಡುವ ವಿಷಯಗಳು.

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		ಆ) ಸಹಾಯಕರು–1: ಬೆಳಗಾಂ ಮತ್ತು ಬೆಂಗಳೂರು ವಿಭಾಗಗಳಿಗೆ ಸಂಬಂಧಿಸಿದ ವಿಷಯಗಳು 1 ಖಾತಾ ಬದಲಾವಣೆಯ ಬಗ್ಗೆ ಬಂದ ದೂರುಗಳ ಬಗ್ಗೆ ಕ್ರಮ ಕೈಗೊಳ್ಳುವುದು. ಮ್ಯುಟೇಷನ್ ವಿವಾದ ಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಪರಿಶೀಲಿಸುವುದು. 2 ಖಾತೆ:ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ನ್ಯಾಯಾಲಯ ಪ್ರಕರಣಗಳು 3 ಖಾತೆ:ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ವಿಧಾನ ಸಭೆ/ಪರಿಷತ್ ಪ್ರಶ್ನೆಗಳು. ಅರ್ಜಿಸಮಿತಿ. ಭರವಸೆ ಇತ್ಯಾದಿ ವಿಷಯಗಳು **ಇ) ಸಹಾಯಕರು–2** 1 ಡಿ.ಸಿ.ಬಿಯನ್ನು ತಯಾರಿಸುವುದು. 2 ಬ್ಯಾಂಕ್ ಸಾಲ ವಸೂಲು ಮಾಡುವುದು 3 ಸರ್ಕಾರಿ ಬಾಕಿಯನ್ನು ಭೂ ಕಂದಾಯ ಬಾಕಿಯೆಂದು ವಸೂಲು ಮಾಡುವುದು 4 ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿ ಸಭೆಗೆ ಸಂಬಂಧಿಸಿದ ವಿಷಯಗಳು (ಎಸ್.ಎಲ್.ಬಿ.ಸಿ). 5 ಬೆಳೆ ಅಂಕಿ ಅಂಶಗಳ ಯೋಜನೆಗೆ ಸಂಬಂಧಿಸಿದ ವಿಷಯಗಳು. 6 ಆಣೇವಾರಿಗೆ ಸಂಬಂಧಿಸಿದ ವಿಷಯಗಳು. 7. ವಿಧಾನಸಭೆ:ವಿಧಾನ ಪರಿಷತ್‌ಗೆ ಸಂಬಂಧಿಸಿದ ಅರ್ಜಿ, ಭರವಸೆ, ಪ್ರಶ್ನೆ ಇತ್ಯಾದಿ ವಿಷಯಗಳು 8 ಮೇಲ್ಕಂಡ ವಿಷಯಗಳಿಗೆ ಸಂಬಂಧಿಸಿದ ನ್ಯಾಯಾಲಯದ ಪ್ರಕರಣಗಳು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿಗೆ ಕಳುಹಿಸುವುದು.
10.	ಸರ್ಕಾರದ ಅಧೀನ ಕಾರ್ಯದರ್ಶಿ (ಮುಜರಾಯಿ) 5ನೇಮಹಡಿ, ಬಹುಮಹಡಿ, ಕಟ್ಟಡ, ಬೆಂಗಳೂರು–560 001	ಬೆಂಗಳೂರು ಮತ್ತು ಗುಲ್ಬರ್ಗಾ ವಿಭಾಗಗಳಿಗೆ ಸೇರಿದ ದೇವಸ್ಥಾನಗಳ ಅಭಿವೃದ್ಧಿ ಕಾಮಗಾರಿಗಳ ಮತ್ತು ಜೀರ್ಣೋದ್ಧಾರದ ಬಗ್ಗೆ, ಸದರಿ ವಿಭಾಗಗಳಿಗೆ ಸೇರಿದ ದೇವಸ್ಥಾನಗಳ ಆಸ್ತಿ ವಿಷಯ ಅಂದರೆ ಗುತ್ತಿಗೆ/ಬಾಡಿಗೆ/ ನವೀಕರಣ ಹಾಗೂ ಸ್ಥಿರೀಕರಣ ಇತ್ಯಾದಿ ಮತ್ತು ಈ ಎರಡು ವಿಭಾಗಗಳಿಗೆ ಸೇರಿದ ದೇವಸ್ಥಾನಗಳಿಗೆ ಸಹಾಯಾನುದಾನ ಬಿಡುಗಡೆ ಮಾಡುವುದು. ರಾಜ್ಯದ 224 ವಿಧಾನ ಸಭಾ ಕ್ಷೇತ್ರಗಳಿಗೆ ಆರಾಧನಾ ಸಮಿತಿ ರಚಿಸುವ ಬಗ್ಗೆ ಮತ್ತು ವಿಧಾನ ಪರಿಷತ್ ಮತ್ತು ವಿಧಾನ ಸಭೆಗಳ ಪ್ರಶ್ನೆಗಳಿಗೆ ಉತ್ತರ ತಯಾರಿಸುವುದು ಹಾಗೂ ಅರ್ಜಿ ಸಮಿತಿ

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		ಭರವಸೆ ಸಮಿತಿ ಮತ್ತು ಸಾರ್ವತ್ರಿಕ ಲೆಕ್ಕ ಪತ್ರಗಳ ಸಮಿತಿ ವಿಷಯ ಹಾಗೂ ನ್ಯಾಯಾಲಯದ ಪ್ರಕರಣಗಳ ಕುರಿತಂತೆ, ಕೈಲಾಸ ಮಾನಸ ಸರೋವರ ಯಾತ್ರ ಯೋಜನೆ ಹಾಗೂ ಧಾರ್ಮಿಕ ದತ್ತಿ ಇಲಾಖೆಯ ಗ್ರೂಪ್ – ಎ ಅಧಿಕಾರಿಗಳಿಗೆ ಸಂಬಂಧಿಸಿದ ಸೇವಾ ವಿಷಯಗಳ ನಿರ್ವಹಣೆ, ಮುಜರಾಯಿ ಇಲಾಖೆಯ ದೇವಸ್ಥಾನಗಳ ಇನಾಂ ಆಬಾಲಿಷನ್ ಕಾಯ್ದೆ ಅನ್ವಯ ತಸ್ತೀಕ್ ಬಿಡುಗಡೆ ಮಾಡುವುದು, ಸರ್ಕಾರಿ ಸಂಸ್ಕೃತ ಕಾಲೇಜುಗಳ ಗ್ರೂಪ್–ಎ ಉಪನ್ಯಾಸಕರುಗಳ ಸೇವಾ ವಿಷಯಗಳು ಮತ್ತು ಮುಜರಾಯಿ ಕಾಯ್ದೆ ನಿಯಮಗಳನ್ನು ತಿದ್ದುಪಡಿ ಮಾಡುವ ಬಗ್ಗೆ
11.	ಪೀಠಾಧಿಕಾರಿ ಮುಜರಾಯಿ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಮೈಸೂರು ಮತ್ತು ಬೆಳಗಾಂ ವಿಭಾಗಕ್ಕೆ ಸೇರಿದ ದೇವಸ್ಥಾನಗಳ ಅಭಿವೃದ್ಧಿ ಕಾಮಗಾರಿ ಮತ್ತು ಜೀರ್ಣೋದ್ಧಾರದ ಬಗ್ಗೆ, ಸದರಿ ವಿಭಾಗಗಳಿಗೆ ಸೇರಿದ ಮುಜರಾಯಿ ದೇವಸ್ಥಾನಗಳ ಆಸ್ತಿವಿಷಯ ಅಂದರೆ, ಗುತ್ತಿಗೆ / ಬಾಡಿಗೆ / ನವೀಕರಣ ಹಾಗೂ ಸ್ಥಿರೀಕರಣ ಇತ್ಯಾದಿ. ಈ ಎರಡೂ ವಿಭಾಗಗಳಿಗೆ ಸೇರಿದ ದೇವಸ್ಥಾನಗಳಿಗೆ ಸಹಾಯಾನುದಾನ ಬಿಡುಗಡೆ ಮಾಡುವುದು. ಧಾರ್ಮಿಕ ದತ್ತಿ ಇಲಾಖೆಯ ಗ್ರೂಪ್ – ಬಿ ಅಧಿಕಾರಿಗಳಿಗೆ ಸಂಬಂಧಿಸಿದ ಸೇವಾ ವಿಷಯಗಳ ನಿರ್ವಹಣೆ **ಅ) ಹಿರಿಯ ಸಹಾಯಕರು:** ಧಾರ್ಮಿಕ ದತ್ತಿ ಇಲಾಖೆಯ ಗ್ರೂಪ್ – ಎ ಮತ್ತು ಗ್ರೂಪ್ – ಬಿ ಅಧಿಕಾರಿಗಳಿಗೆ ಸಂಬಂಧಿಸಿದ ಸೇವಾ ವಿಷಯಗಳು, ಇಲಾಖಾ ವಿಚಾರಣೆಗಳು, ಇಲಾಖೆಯ ಅಧಿನಿಯಮ, ನಿಯಮಗಳಿಗೆ ಸಂಬಂಧಿಸಿದ ವಿಷಯಗಳು, ಸರ್ಕಾರಿ ಸಂಸ್ಕೃತ ಕಾಲೇಜುಗಳಿಗೆ ಸಂಬಂಧಿಸಿದ ವಿಷಯಗಳು, ಮುಜರಾಯಿ ಇಲಾಖೆಯ ದೇವಾಲಯಗಳ ಇನಾಂ ಆಬಾಲಿಷನ್ ಕಾಯ್ದೆಯನ್ವಯ ತಸ್ತೀಕ್ ಕುರಿತ ವಿಷಯಗಳು, ಸಮನ್ವಯ ಶಾಖೆಯ ವಿಷಯಗಳು ಹಾಗೂ ಮೇಲ್ಕಂಡ ಎಲ್ಲಾ ವಿಷಯಗಳಿಗೆ ಸಂಬಂಧಿಸಿದಂತೆ ವಿಧಾನ ಸಭೆ/ ಪರಿಷತ್ತಿನ ಪ್ರಶ್ನೋತ್ತರಗಳು, ಭರವಸೆಗಳು ಮತ್ತು ಇದಕ್ಕೆ ಸಂಬಂಧಪಟ್ಟಂತೆ ನ್ಯಾಯಾಲಯಗಳ ಪ್ರಕರಣಗಳನ್ನು ನಿರ್ವಹಿಸುವುದು. **ಆ) ಸಹಾಯಕರು–1:** ದೇವಾಲಯಗಳು ಮತ್ತು ಧಾರ್ಮಿಕ ಸಂಸ್ಥೆಗಳಿಗೆ ಎಲ್ಲಾ ರೀತಿಯ ದುರಸ್ಥಿ / ಜೀರ್ಣೋದ್ಧಾರ / ಹೊಸ ನಿರ್ಮಾಣ / ಆರಾಧನಾ ಯೋಜನೆಯಡಿ ನೀಡಬಹುದಾದ ಅನುದಾನ ಹಾಗೂ ನಗದು ಅನುದಾನ, ದೇವಾಲಯಗಳು ಹಾಗೂ ಧಾರ್ಮಿಕ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಅಭಿವೃದ್ಧಿ ನಿರ್ಮಾಣ / ಆಡಳಿತಾತ್ಮಕ ಮಂಜೂರಾತಿ, ಧಾರ್ಮಿಕ ಸಂಸ್ಥೆಗಳ ಸಹಾಯಾನುದಾನದ ಬಗ್ಗೆ ಕಾಲ ವಿಳಂಬ ವಿನಾಯಿತಿ ಹಾಗೂ ಮೇಲ್ಕಂಡ ಎಲ್ಲಾ ವಿಷಯಗಳಿಗೆ ಸಂಬಂಧಿಸಿದಂತೆ ವಿಧಾನ ಸಭೆ / ಪರಿಷತ್ತಿನ ಪ್ರಶ್ನೋತ್ತರಗಳು, ಭರವಸೆಗಳು, ಅರ್ಜಿ ಸಮಿತಿಗೆ ಸಂಬಂಧಿಸಿದ ವಿಷಯಗಳನ್ನು ನಿರ್ವಹಿಸುವುದು. **ಇ) ಸಹಾಯಕರು–2** ದೇವಾಲಯಗಳು ಮತ್ತು ಧಾರ್ಮಿಕ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಸ್ಥಿರಾಸ್ತಿಗಳಾದ ಜಮೀನು / ನಿವೇಶನ / ಕಟ್ಟಡಗಳು / ಚರಾಸ್ತಿಗಳಾದ ದೇವಾಲಯದ ಆಭರಣ,

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		ಅನುಪಯುಕ್ತ ಆಭರಣಗಳ ವಗೈರೆಗಳ ಮಾರಾಟ/ ಗುತ್ತಿಗೆ ನೀಡುವುದು / ಬಾಡಿಗೆ ನೀಡಬಹುದಾದ ವಿಷಯ, ಸರ್ಕಾರದ/ಇಲಾಖಾ/ಜಿಲ್ಲಾ/ಕ್ಷೇತ್ರ ಮಟ್ಟಗಳಲ್ಲಿ ರಚಿಸಬಹುದಾದ, ಮುಂದುವರಿಸಬಹುದಾದ ಹಾಗೂ ಆಯಾಯ ಧಾರ್ಮಿಕ ಸಂಸ್ಥೆಗಳ ನಿಯಮಾನುಸಾರ ರಚಿಸಬಹುದಾದ / ಮುಂದುವರಿಸಬಹುದಾದ ಸಮಿತಿಗಳು ಹಾಗೂ ಮೇಲ್ಕಂಡ ಎಲ್ಲಾ ವಿಷಯಗಳಿಗೆ ಸಂಬಂಧಿಸಿದಂತೆ ವಿಧಾನ ಸಭೆ / ಪರಿಷತ್ತಿನ ಪ್ರಶ್ನೋತ್ತರಗಳು, ಭರವಸೆಗಳು, ಅರ್ಜಿ ಸಮಿತಿ ಮತ್ತು ಇದಕ್ಕೆ ಸಂಬಂಧಪಟ್ಟಂತೆ ನ್ಯಾಯಾಲಯಗಳ ಪ್ರಕರಣಗಳನ್ನು ನಿರ್ವಹಿಸುವುದು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
12.	ಸರ್ಕಾರದ ಅಧೀನ ಕಾರ್ಯದರ್ಶಿ, ಭೂ ಮಂಜೂರಾತಿ–1 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ರಾಮನಗರ ಜಿಲ್ಲೆ, ಕೋಲಾರ ಜಿಲ್ಲೆ, ಚಿಕ್ಕಬಳ್ಳಾಪುರ ಜಿಲ್ಲೆ, ಶಿವಮೊಗ್ಗ ಜಿಲ್ಲೆ, ಹಾಸನ ಜಿಲ್ಲೆ, ಕೊಡಗು ಜಿಲ್ಲೆಗಳಿಗೆ ಸಂಬಂಧಿಸಿದ ಸರ್ಕಾರಿ ಜಮೀನು ಮಂಜೂರಾತಿಗೆ ಸಂಬಂಧಿಸಿದ ವಿಷಯಗಳು, ಪಿಟಿಸಿಎಲ್ ಕಾಯ್ದೆ ಅಡಿಯಲ್ಲಿ ಅನುಮತಿ ನೀಡುವ ವಿಷಯಗಳು, ಭೂ ಮಂಜೂರಾತಿ ನಿಯಮಗಳು, ಭೂ ಮಂಜೂರಾತಿಗೆ /ಭೂ ಪರಿವರ್ತನೆಗೆ ಸಂಬಂಧಿಸಿದಂತೆ ಕಂದಾಯ ನಿಯಮಗಳು ಹಾಗೂ ಭೂ ಕಂದಾಯ ಕಾಯ್ದೆಗೆ ತಿದ್ದುಪಡಿ ತರುವ ಹಾಗೂ ಇನ್ನಿತರ ಪಾಲಿಸಿ ವಿಷಯಗಳು, ಸರ್ಕಾರಿ ಜಮೀನು ಒತ್ತುವರಿ ಮತ್ತು ಹರಾಜಿಗೆ ಸಂಬಂಧಿಸಿದ ವಿಷಯಗಳು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತದ ವಿಷಯಗಳು.
13.	ಶಾಖಾಧಿಕಾರಿ ಭೂ ಮಂಜೂರಾತಿ–1 ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ರಾಮನಗರ ಜಿಲ್ಲೆ, ಕೋಲಾರ ಜಿಲ್ಲೆ, ಚಿಕ್ಕಬಳ್ಳಾಪುರ ಜಿಲ್ಲೆ, ಶಿವಮೊಗ್ಗ ಜಿಲ್ಲೆ, ಹಾಸನ ಜಿಲ್ಲೆ, ಕೊಡಗು ಜಿಲ್ಲೆಗಳಿಗೆ ಸಂಬಂಧಿಸಿದ ಸರ್ಕಾರಿ ಜಮೀನು ಮಂಜೂರಾತಿಗೆ ಸಂಬಂಧಿಸಿದ ವಿಷಯಗಳು, ಪಿಟಿಸಿಎಲ್ ಕಾಯ್ದೆ ಅಡಿಯಲ್ಲಿ ಅನುಮತಿ ನೀಡುವ ವಿಷಯಗಳು, ಭೂ ಮಂಜೂರಾತಿ ನಿಯಮಗಳು, ಭೂ ಮಂಜೂರಾತಿಗೆ / ಭೂ ಪರಿವರ್ತನೆಗೆ ಸಂಬಂಧಿಸಿದಂತೆ ಕಂದಾಯ ನಿಯಮಗಳು ಹಾಗೂ ಭೂ ಕಂದಾಯ ಕಾಯ್ದೆಗೆ ತಿದ್ದುಪಡಿ ತರುವ ಹಾಗೂ ಇನ್ನಿತರ ಪಾಲಿಸಿ ವಿಷಯಗಳು, ಸರ್ಕಾರಿ ಜಮೀನು ಒತ್ತುವರಿ ಮತ್ತು ಹರಾಜಿಗೆ ಸಂಬಂಧಿಸಿದ ವಿಷಯಗಳು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತದ ವಿಷಯಗಳು. **ಅ) ಹಿರಿಯ ಸಹಾಯಕರು:** ಬೆಂಗಳೂರು ಗ್ರಾಮಾಂತರ ಜಿಲ್ಲೆ, ರಾಮನಗರ ಜಿಲ್ಲೆಗಳಿಗೆ ಸಂಬಂಧಿಸಿದ ಸರ್ಕಾರಿ ಜಮೀನು ಮಂಜೂರಾತಿಗೆ ಸಂಬಂಧಿಸಿದ ವಿಷಯಗಳು, ಪಿಟಿಸಿಎಲ್ ಕಾಯ್ದೆ ಅಡಿಯಲ್ಲಿ ಅನುಮತಿ ನೀಡುವ ವಿಷಯಗಳು, ಭೂ ಮಂಜೂರಾತಿ ನಿಯಮಗಳು, ಭೂ ಮಂಜೂರಾತಿಗೆ / ಭೂ ಪರಿವರ್ತನೆಗೆ ಸಂಬಂಧಿಸಿದಂತೆ ಕಂದಾಯ ನಿಯಮಗಳು ಹಾಗೂ ಭೂ ಕಂದಾಯ ಕಾಯ್ದೆಗೆ ತಿದ್ದುಪಡಿ ತರುವ ಹಾಗೂ ಇನ್ನಿತರ ಪಾಲಿಸಿ ವಿಷಯಗಳು.

ಕ್ರ ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		ಆ) ಸಹಾಯಕರು–1: ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದ ಸರ್ಕಾರಿ ಜಮೀನು ಮಂಜೂರಾತಿಗೆ ಸಂಬಂಧಿಸಿದ ವಿಷಯಗಳು, ಪಿಟಿಸಿಎಲ್ ಕಾಯ್ದೆ ಅಡಿಯಲ್ಲಿ ಅನುಮತಿ ' ಡುವ ವಿಷಯಗಳು, ಸರ್ಕಾರಿ ಜಮೀನು ಒತ್ತುವರಿ ಮತ್ತು ಹರಾಜಿಗೆ ಸಂಬಂಧಿಸಿದ ವಿಷಯಗಳು. **ಇ) ಸಹಾಯಕರು–2** ಕೋಲಾರ ಜಿಲ್ಲೆ, ಚಿಕ್ಕಬಳ್ಳಾಪುರ ಜಿಲ್ಲೆ, ಶಿವಮೊಗ್ಗ ಜಿಲ್ಲೆ, ಹಾಸನ ಜಿಲ್ಲೆ, ಕೊಡಗು ಜಿಲ್ಲೆಗಳಿಗೆ ಸಂಬಂಧಿಸಿದ ಸರ್ಕಾರಿ ಜಮೀನು ಮಂಜೂರಾತಿಗೆ ಸಂಬಂಧಿಸಿದ ವಿಷಯಗಳು, ಪಿಟಿಸಿಎಲ್ ಕಾಯ್ದೆ ಅಡಿಯಲ್ಲಿ ಅನುಮತಿ ನೀಡುವ ವಿಷಯಗಳು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
14.	ಪೀಠಾಧಿಕಾರಿ/ ಶಾಖಾಧಿಕಾರಿ ಭೂ ಮಂಜೂರಾತಿ–2 ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಕಿರಿಯ ಸಹಾಯಕರು ಈ) ದಲಾಯತ್	ಚಿಕ್ಕಮಗಳೂರು, ಉಡುಪಿ ಹಾಗೂ ದಕ್ಷಿಣ ಕನ್ನಡ ಮೈಸೂರು, ಮಂಡ್ಯ, ಕಾರವಾರ ಮತ್ತು ಚಾಮರಾಜನಗರ ಜಿಲ್ಲೆಗಳ ಭೂಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್ ಪ್ರಕರಣಗಳಿಗೆ ಸಂಬಂಧಿಸಿದ ವಿಷಯಗಳು. **ಅ) ಹಿರಿಯ ಸಹಾಯಕರು:** ಚಿಕ್ಕಮಗಳೂರು, ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಭೂಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್ ಪ್ರಕರಣಕ್ಕೆ ಸಂಬಂಧಿಸಿದ ವಿಷಯಗಳ ನಿರ್ವಹಣೆ **ಆ) ಸಹಾಯಕರು** ಮೈಸೂರು, ಮಂಡ್ಯ, ಕಾರವಾರ ಮತ್ತು ಚಾಮರಾಜನಗರ ಜಿಲ್ಲೆಗಳ ಭೂಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್. ಪ್ರಕರಣಕ್ಕೆ ಸಂಬಂಧಿಸಿದ ವಿಷಯಗಳು. **ಇ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
15.	ಸರ್ಕಾರದ ಉಪ ಕಾರ್ಯದರ್ಶಿ, (ಸಮನ್ವಯ, ವಿಶೇಷ ಕೋಶ ನೋಂದಣಿ ಮತ್ತು ಮುದ್ರಾಂಕ, ಕೆಎಟಿ, ಸೇವೆಗಳು) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕಂದಾಯ ಇಲಾಖೆಯ ಸಮನ್ವಯ, ವಿಶೇಷ ಕೋಶ ನೋಂದಣಿ ಮತ್ತು ಮುದ್ರಾಂಕ, ಕೆಎಟಿ, ಸೇವೆಗಳು ಶಾಖೆಗಳಲ್ಲಿ ನಿರ್ವಹಿಸುವ ವಿಷಯಗಳ ಮೇಲ್ವಿಚಾರಣೆ ಹಾಗೂ ಅಧೀನ ಸಿಬ್ಬಂದಿಗಳ ನಿಯಂತ್ರಣ ಇಲಾಖೆಗಳಲ್ಲಿನ ಸಮನ್ವಯ ಹಾಗೂ ಸಂಘಟನಾ ಮತ್ತು ವಿಧಾನಾಧಿಕಾರಿಯಾಗಿ ಕಾರ್ಯನಿರ್ವಹಿಸುವುದು.

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
16.	ಸರ್ಕಾರದ ಅಧೀನ ಕಾರ್ಯದರ್ಶಿ, ಸಮನ್ವಯ, ಸ್ವೀಕೃತಿ & ರವಾನೆ ಭೂಮಂಜೂರಾತಿ–3 ಶಾಖೆಗಳು: 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕಂದಾಯ ಇಲಾಖೆಯ ಸಮನ್ವಯ, ಸ್ವೀಕೃತಿ ಮತ್ತು ರವಾನೆ ಶಾಖೆ ಹಾಗೂ ಭೂ ಮಂಜೂರಾತಿ–3 ಶಾಖೆಗಳಿಗೆ ಸಂಬಂಧಿಸಿದಂತೆ ಹಾಗೂ 14 ಜಿಲ್ಲೆಗಳ ಭೂ ಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್ ಪ್ರಕರಣಗಳಿಗೆ ಸಂಬಂಧಿಸಿದ ವಿಷಯಗಳು,
17.	ಶಾಖಾಧಿಕಾರಿ ಸಮನ್ವಯ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಕಂದಾಯ ಇಲಾಖೆಯ ಸಮನ್ವಯ ಕಾರ್ಯ, ಎಂಪಿಕ್ ಮತ್ತು ಕಡತ /ಪತ್ರಗಳ ವಿಲೇವಾರಿಯ ಮಾಸಿಕ ಸಭೆ ನಡೆಸುವುದು. **ಅ) ಹಿರಿಯ ಸಹಾಯಕರು:** ಕಡತ /ಪತ್ರಗಳ ವಿಲೇವಾರಿಯ ಮಾಸಿಕ ಸಭೆ ಮತ್ತು ಎಂಪಿಕ್ ಸಭೆ ಆರ್‌ಎಫ್‌ಡಿ ವಿಷಯ ಹಾಗೂ ಸಾಮನ್ಯ ವಿಷಯಗಳ ನಿರ್ವಹಣೆ. **ಆ) ಸಹಾಯಕರು–1:** ವಿಧಾನಸಭೆ ಪ್ರಶ್ನೆಗಳು/ ಭರವಸೆಗಳು, ಗಮನ ಸೆಳೆಯುವ ಸೂಚನೆ, ಆಯವ್ಯಯ ಭಾಷಣ ತಯಾರಿಕೆ ಹಾಗೂ ಕಾರ್ಯನೀತಿ ವಿಷಯ, ಆಡಿಟ್ ವಿಷಯ, ಅರ್ಜಿ ಸಮಿತಿಯ ವಿಷಯ ಹಾಗೂ ಸಾಮಾನ್ಯ ವಿಷಯಗಳ ನಿರ್ವಹಣೆ **ಇ) ಸಹಾಯಕರು–2** ವಿಧಾನ ಪರಿಷತ್ ಪ್ರಶ್ನೆಗಳು/ ಭರವಸೆಗಳು, ಗಮನ ಸೆಳೆಯುವ ಸೂಚನೆ, ಅರ್ಜಿಸಮಿತಿ, ಮಾಹಿತಿ ಹಕ್ಕು ವಿಷಯಗಳ ನಿರ್ವಹಣೆ, ವಾರ್ಷಿಕ ವರದಿ ತಯಾರಿಕೆ, ರಾಜ್ಯಪಾಲರ ಭಾಷಣ, ಜಂಟಿ ಅಧಿವೇಶನದ ವಿಷಯಗಳು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
18.	ಶಾಖಾಧಿಕಾರಿ ಸ್ವೀಕೃತಿ ಮತ್ತು ರವಾನೆ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕಂದಾಯ ಇಲಾಖೆಗೆ ಸಂಬಂಧಿಸಿದ ಪತ್ರಗಳನ್ನು ಸ್ವೀಕರಿಸುವುದು, ಶಾಖಾವಾರು ವಿಂಗಡಿಸಿ ಸಂಬಂಧಿಸಿದ ಶಾಖೆಗಳಿಗೆ ವಿತರಿಸುವುದು ಹಾಗೂ ಇಲಾಖೆಯಿಂದ ಹೊರಗಡೆ ಹೋಗುವ ಪತ್ರಗಳ ರವಾನೆಗೆ ಸಂಬಂಧಿಸಿದ ವಿಷಯಗಳನ್ನು ನಿರ್ವಹಿಸುವುದು ಹಾಗೂ ಇಲಾಖೆಗೆ ಅಗತ್ಯವಿರುವ ಲೇಖನ ಸಾಮಗ್ರಿ ಮತ್ತು ಸಲಕರಣೆಗಳನ್ನು ಸರ್ಕಾರಿ ಮುದ್ರಣಾಲಯದಿಂದ ಪಡೆಯುವುದು, ಮುದ್ರಣಾಲಯದಿಂದ ಸರಬರಾಜು ಮಾಡದಿರುವ ಲೇಖನ ಸಾಮಗ್ರಿ ಮತ್ತು ಸಲಕರಣೆಗಳ ಖರೀದಿ, ದಾಸ್ತಾನು ಮತ್ತು ವಿತರಣೆ. **ಅ) ಸಹಾಯಕರು:** ಇಲಾಖೆಗೆ ಅಗತ್ಯವಿರುವ ಲೇಖನ ಸಾಮಗ್ರಿ ಮತ್ತು ಸಲಕರಣೆಗಳ ದಾಸ್ತಾನಿಗೆ ಸಂಬಂಧಿಸಿದ ವಿಷಯ ನಿರ್ವಹಣೆ. **ಆ) ಕಿರಿಯ ಸಹಾಯಕರು–1** ಶಾಖೆಯಲ್ಲಿ ಸ್ವೀಕೃತವಾಗುವ ಎಲ್ಲಾ ಸ್ವೀಕೃತಿಗಳನ್ನು ಸ್ವೀಕರಿಸುವುದು, ವಿಂಗಡಿಸುವುದು ಮತ್ತು ಸಂಬಂಧಿಸಿದ ಶಾಖೆಗಳಿಗೆ ವಿತರಿಸುವುದು.

ಕ್ರ ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
	ಅ) ಸಹಾಯಕರು ಆ) ಕಿರಿಯ ಸಹಾಯಕರು–1 ಇ) ಕಿರಿಯ ಸಹಾಯಕರು–2 ಈ) ಕಿರಿಯ ಸಹಾಯಕರು–3 ಉ) ಬೆರಳಚ್ಚುಗಾರರು–1 ಊ) ದಲಾಯತ್–3 ಹುದ್ದೆ	**ಇ) ಕಿರಿಯ ಸಹಾಯಕರು–2** ಇಲಾಖೆಗೆ ಅಗತ್ಯವಿರುವ ಲೇಖನ ಸಾಮಗ್ರಿ ಮತ್ತು ಸಲಕರಣೆಗಳನ್ನು ಸರ್ಕಾರಿ ಮುದ್ರಣಾಲಯದಿಂದ ಪಡೆಯುವುದು, ಮುದ್ರಣಾಲಯದಿಂದ ಸರಬರಾಜು ಮಾಡದಿರುವ ಲೇಖನ ಸಾಮಗ್ರಿ ಮತ್ತು ಸಲಕರಣೆಗಳ ಖರೀದಿಗೆ ಸಂಬಂಧಿಸಿದ ವಿಷಯ **ಈ) ಕಿರಿಯ ಸಹಾಯಕರು–3** ಲೇಖನ ಸಾಮಗ್ರಿ ಮತ್ತು ಸಲಕರಣೆಗಳ ದಾಸ್ತಾನು ಮತ್ತು ವಿತರಣೆಗೆ ಸಂಬಂಧಿಸಿದ ವಿಷಯ.
19.	ಶಾಖಾಧಿಕಾರಿ ಭೂ ಮಂಜೂರಾತಿ–3 ಶಾಖೆ, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಭೂ ಮಂಜೂರಾತಿ–3 ಶಾಖೆಗೆ ಸಂಬಂಧಿಸಿದಂತೆ 14 ಜಿಲ್ಲೆಗಳ ಭೂ ಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್ ಪ್ರಕರಣಗಳಿಗೆ ಸಂಬಂಧಿಸಿದ ವಿಷಯಗಳು, ನ್ಯಾಯಾಲಯ ಪ್ರಕರಣಗಳು, ವಿಧಾನ ಮಂಡಲದ ವಿಷಯಗಳ ನಿರ್ವಹಣೆ. **ಅ) ಹಿರಿಯ ಸಹಾಯಕರು:** ಬೆಳಗಾವಿ, ಬಾಗಲಕೋಟೆ, ಬಿಜಾಪುರ, ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳ ಪರಿಶೀಲನೆ, ಭೂ ಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್ ಪ್ರಕರಣಕ್ಕೆ ಸಂಬಂಧಿಸಿದ ವಿಷಯಗಳು ಹಾಗೂ ನ್ಯಾಯಾಲಯ ಪ್ರಕರಣಗಳು ಮತ್ತು ಸದರಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ವಿಧಾನ ಮಂಡಲದ ವಿಷಯಗಳು **ಆ) ಸಹಾಯಕರು–1:** ರಾಯಚೂರು, ಕೊಪ್ಪಳ, ಬೀದರ್, ಬಳ್ಳಾರಿ, ಗುಲ್ಬರ್ಗಾ, ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳ ಪರಿಶೀಲನೆ ಭೂ ಮಂಜೂರಾತಿ ಹಾಗೂ ಪಿಟಿಸಿಎಲ್ ಪ್ರಕರಣಕ್ಕೆ ಸಂಬಂಧಿಸಿದ ವಿಷಯಗಳು ಹಾಗೂ ನ್ಯಾಯಾಲಯ ಪ್ರಕರಣಗಳು ಮತ್ತು ಸದರಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ವಿಧಾನ ಮಂಡಲದ ವಿಷಯಗಳು. **ಇ) ಸಹಾಯಕರು–2** ತುಮಕೂರು, ಧಾರವಾಡ, ಗದಗ್, ಹಾವೇರಿ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳ ಪರಿಶೀಲನೆ, ಭೂ ಮಂಜೂರಾತಿ ಹಾಗೂ ಪಿಟಿಸಿಎಲ್ ಪ್ರಕರಣಕ್ಕೆ ಸಂಬಂಧಿಸಿದ ವಿಷಯಗಳು ಹಾಗೂ ನ್ಯಾಯಾಲಯ ಪ್ರಕರಣಗಳು ಮತ್ತು ಸದರಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ವಿಧಾನ ಮಂಡಳದಿಂದ ಬರುವ ಪ್ರಶ್ನೆಗಳಿಗೆ ಉತ್ತರ ತಯಾರಿಸುವುದು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
20.	ಸರ್ಕಾರದ ಅಧೀನ ಕಾರ್ಯದರ್ಶಿ, ವಿಶೇಷ ಕೋಶ, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–560 001	ಕಂದಾಯ ಇಲಾಖೆಯ ಆಡಳಿತ ನಿಯಂತ್ರಣದಲ್ಲಿರುವ ಕ್ಷೇತ್ರ ಇಲಾಖೆಯ ಮುಖ್ಯಸ್ಥರನ್ನು ಹೊರತುಪಡಿಸಿ, ವಿವಿಧ ಹಂತದಲ್ಲಿನ ಅಧಿಕಾರಿಗಳು ಮತ್ತು ನೌಕರರ ಬಗ್ಗೆ ದೂರುಗಳು, ಕಿರುಕುಳ, ದುರ್ನಡತೆ, ಭ್ರಷ್ಟಾಚಾರ, ವಿಳಂಬದ ಬಗ್ಗೆ ಬರುವ ದೂರು / ಮನವಿಗಳ ಕುರಿತು ತನಿಖೆ ಮಾಡುವುದು, ಕಛೇರಿಗಳ Random ತಪಾಸಣೆ ನಡೆಸುವುದು.
	ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ)ಬೆರಳಚ್ಚುಗಾರರು ಈ) ಕಿರಿಯ ಸಹಾಯಕರು ಉ) ದಲಾಯತ್	**ಅ) ಹಿರಿಯ ಸಹಾಯಕರು:** ಬೆಂಗಳೂರು ಮತ್ತು ಬೆಳಗಾವಿ ವಿಭಾಗಗಳಿಗೆ ಸಂಬಂಧಿಸಿದಂತೆ ಕ್ಷೇತ್ರ ಕಛೇರಿಗಳಲ್ಲಿ ಅಧಿಕಾರಿಗಳು/ಸಿಬ್ಬಂದಿಗಳ ವಿರುದ್ಧದ ದುರ್ನಡತೆ, ಕಿರುಕುಳ, ಭ್ರಷ್ಟಾಚಾರ ಮತ್ತು ವಿಳಂಬದ ದೂರುಗಳ ನಿರ್ವಹಣೆ. ಕಛೇರಿ ತಪಾಸಣೆಗೆ ಸಹಕಾರ. **ಆ) ಸಹಾಯಕರು–1:** ಮೈಸೂರು ಮತ್ತು ಗುಲ್ಬರ್ಗ ವಿಭಾಗಗಳಿಗೆ ಸಂಬಂಧಿಸಿದಂತೆ ಕ್ಷೇತ್ರ ಕಛೇರಿಗಳಲ್ಲಿ ಅಧಿಕಾರಿಗಳು/ಸಿಬ್ಬಂದಿಗಳು ನೀಡುವ ಕಿರುಕುಳ ಮತ್ತು ವಿಳಂಬದ ದೂರುಗಳ ನಿರ್ವಹಣೆ. Random ತಪಾಸಣೆಗೆ ಸಹಕಾರ. **ಇ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
21.	ಸರ್ಕಾರದ ಅಧೀನ ಕಾರ್ಯದರ್ಶಿ, ನೋಂದಣಿ & ಮುದ್ರಾಂಕ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ ಸಂಬಂಧಿಸಿದ ವಿಷಯಗಳು, ನೋಂದಣಿ ಕಾಯ್ದೆ ಮತ್ತು ಮುದ್ರಾಂಕ ಕಾಯ್ದೆ ಹಾಗೂ ಅವುಗಳಡಿಯ ನಿಯಮಗಳಿಗೆ ಸಂಬಂಧಿಸಿದ ವಿಷಯಗಳು. ಗ್ರೂಪ್–ಎ ಮತ್ತು ಬಿ ಅಧಿಕಾರಿಗಳ ಸೇವಾ ವಿಷಯಗಳು, ಮುದ್ರಾಂಕ ಮತ್ತು ನೋಂದಣಿ ಶುಲ್ಕ ವಿನಾಯಿತಿ/ರಿಯಾಯಿತಿ, ಕಟ್ಟಡಗಳ ಬಾಡಿಗೆ, ಸಂಚಿತ ಮುದ್ರಾಂಕ ಶುಲ್ಕ ಪಾವತಿ ವಿಷಯಗಳು.
22.	ಪೀಠಾಧಿಕಾರಿ/ಶಾಖಾಧಿಕಾರಿ ನೋಂದಣಿ ಮತ್ತು ಮುದ್ರಾಂಕ ಶಾಖೆ ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಕಿರಿಯ ಸಹಾಯಕರು ಈ) ದಲಾಯತ್	ಗ್ರೂಪ್–ಸಿ ಮತ್ತು ಡಿ ನೌಕರರುಗಳ ಸೇವಾ ವಿಷಯಗಳು, ಮುದ್ರಾಂಕ ಶುಲ್ಕದ ಮರುಪಾವತಿ. **ಅ) ಹಿರಿಯ ಸಹಾಯಕರು:** ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ ಸಂಬಂಧಿಸಿದ ವಿಷಯಗಳು, ನೋಂದಣಿ ಕಾಯ್ದೆ ಮತ್ತು ಮುದ್ರಾಂಕ ಕಾಯ್ದೆ ಹಾಗೂ ಅವುಗಳಡಿಯ ನಿಯಮಗಳಿಗೆ ಸಂಬಂಧಿಸಿದ ವಿಷಯಗಳು. ಗ್ರೂಪ್–ಎ ಮತ್ತು ಬಿ ಅಧಿಕಾರಿಗಳ ಸೇವಾ ವಿಷಯಗಳು, ಮುದ್ರಾಂಕ ಮತ್ತು ನೋಂದಣಿ ಶುಲ್ಕ ವಿನಾಯಿತಿ / ರಿಯಾಯಿತಿ, ಕಟ್ಟಡಗಳ ಬಾಡಿಗೆ, ಸಂಚಿತ ಮುದ್ರಾಂಕ ಶುಲ್ಕ ಪಾವತಿ ವಿಷಯಗಳು. **ಆ) ಸಹಾಯಕರು** ಗ್ರೂಪ್–ಸಿ ಮತ್ತು ಡಿ ನೌಕರರುಗಳ ಸೇವಾ ವಿಷಯಗಳು, ಮುದ್ರಾಂಕ ಶುಲ್ಕದ ಮರುಪಾವತಿ.

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		ಇ) ಕಿರಿಯ ಸಹಾಯಕರು: ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು. ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
23.	ಸರ್ಕಾರದ ಅಧೀನ ಕಾರ್ಯದರ್ಶಿ, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ (ಕೆ.ಎ.ಟಿ.) ಮತ್ತು ಬಾಡಿಗೆ ನಿಯಂತ್ರಣ ಶಾಖೆ,5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕರ್ನಾಟಕ ಮೇಲ್ಮನವಿ ನ್ಯಾಯಾಧಿಕರಣದ ನ್ಯಾಯಾಲಯ–1 & 2ರ ಕಂದಾಯ ವಿಷಯಕ್ಕೆ ಸಂಬಂಧಿಸಿದ ಮೇಲ್ಮನವಿ ಮತ್ತು ಪರಿಶೀಲನಾ ಪ್ರಕರಣಗಳ ನಿರ್ವಹಣೆ. ಕರ್ನಾಟಕ ಮೇಲ್ಮನವಿ ನ್ಯಾಯಾಧಿಕರಣಕ್ಕೆ ಸಂಬಂಧಿಸಿದ ಆಡಳಿತಾತ್ಮಕ ಮತ್ತು ಸೇವಾ ವಿಷಯಗಳ ನಿರ್ವಹಣೆ. ಬಾಡಿಗೆ ನಿಯಂತ್ರಣ ಕಾಯ್ದೆಯಡಿ ಬರುವ ವಿಷಯಗಳ ನಿರ್ವಹಣೆ, ಪಬ್ಲಿಕ್ ಪ್ರಿಮೈಸೆಸ್ ಕಾಯ್ದೆಯಡಿ ಬರುವ ವಿಷಯಗಳ ನಿರ್ವಹಣೆ.
24.	ಸರ್ಕಾರದ ಅಧೀನ ಕಾರ್ಯದರ್ಶಿ. ಸೇವೆಗಳು–1, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–560 001	ಕಂದಾಯ ಇಲಾಖೆಯ ಸಿ ವೃಂದದ ಶಿರಸ್ತೇದಾರ್/ ಉಪತಹಶೀಲ್ದಾರರು, ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ದ್ವಿತೀಯ ದರ್ಜೆ ಸಹಾಯಕರು, ವಾಹನ ಚಾಲಕರು ಹಾಗೂ ಡಿ ವೃಂದದ ನೌಕರರ ಸೇವಾ ವಿಷಯಗಳು, ಮಾಜಿ ಪಟೇಲರುಗಳ ಅನುಕಂಪ ಭತ್ಯೆ ವಿಷಯ, ನಾಡಕಛೇರಿಗಳನ್ನು ಸ್ಥಾಪಿಸುವ/ ಮುಂದುವರೆಸುವ ವಿಷಯ, ಐಎಎಸ್/ ಕೆಎಎಸ್ ಅಧಿಕಾರಿಗಳ ಮೇಲಿನ ದೂರಿನ ವಿಷಯಗಳು
25.	ಶಾಖಾಧಿಕಾರಿ ಸೇವೆಗಳು–1 ಶಾಖೆ, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಕಂದಾಯ ಇಲಾಖೆಯ ಸಿ ವೃಂದದ ಶಿರಸ್ತೇದಾರ್/ ಉಪತಹಶೀಲ್ದಾರರು, ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ದ್ವಿತೀಯ ದರ್ಜೆ ಸಹಾಯಕರು, ವಾಹನ ಚಾಲಕರು ಹಾಗೂ ಡಿ ವೃಂದದ ನೌಕರರ ಸೇವಾ ವಿಷಯಗಳು, ಮಾಜಿ ಪಟೇಲರುಗಳ ಅನುಕಂಪ ಭತ್ಯೆ ವಿಷಯ, ನಾಡಕಛೇರಿಗಳನ್ನು ಸ್ಥಾಪಿಸುವ/ ಮುಂದುವರೆಸುವ ವಿಷಯ, ಐಎಎಸ್/ಕೆಎಎಸ್ ಅಧಿಕಾರಿಗಳ ಮೇಲಿನ ದೂರಿನ ವಿಷಯಗಳು. ಅ) ಹಿರಿಯ ಸಹಾಯಕರು: ಕಂದಾಯ ಇಲಾಖೆಯ ಸಿ ವೃಂದದ ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ಹಾಗೂ ಡಿ ವೃಂದದ ನೌಕರರ ಸೇವಾವಿಷಯಗಳು, ಐಎಎಸ್/ಕೆಎಎಸ್ ಅಧಿಕಾರಿಗಳ ಮೇಲಿನ ದೂರು/ ಇಲಾಖಾ ವಿಚಾರಣೆ, ಶಿರಸ್ತೇದಾರ್/ಉಪ ತಹಶೀಲ್ದಾರ್ ವೃಂದದ ಜೇಷ್ಠತಾ ಪಟ್ಟಿ ತಯಾರಿಸುವ ಕಾರ್ಯಗಳನ್ನು ನಿರ್ವಹಿಸುವುದು. ಆ) ಸಹಾಯಕರು–1: ನಾಡ ಕಛೇರಿಗಳನ್ನು ಸ್ಥಾಪಿಸುವ /ಮುಂದುವರೆಸುವ ವಿಷಯ, ಕಂದಾಯ ಇಲಾಖೆಯ ಸಿ ವೃಂದದ ಶಿರಸ್ತೇದಾರ್/ಉಪ ತಹಶೀಲ್ದಾರರು, ವಾಹನ ಚಾಲಕರ ಸೇವಾ ವಿಷಯಗಳು ಹಾಗೂ ಇಲಾಖಾ ವಿಚಾರಣೆಗಳನ್ನು ನಿರ್ವಹಿಸುವುದು

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		ಇ) ಸಹಾಯಕರು–2 ಅನುವಂಶಿಕ/ಅನುವಂಶಿಕರಲ್ಲದ (ಉತ್ತರ ಕನ್ನಡ ಜಿಲ್ಲೆಯಲ್ಲಿ ಮಾತ್ರ) ಮಾಜಿ ಪಟೇಲರುಗಳ ಅನುಕಂಪ ಭತ್ಯೆ ವಿಷಯ ಹಾಗೂ ಕಂದಾಯ ಇಲಾಖೆಯ ಟ್ವತೀಯ ದರ್ಜೆ ಸಹಾಯಕರ ಸೇವಾ ವಿಷಯಗಳು ಹಾಗೂ ಇಲಾಖಾ ವಿಚಾರಣೆಗಳನ್ನು ನಿರ್ವಹಿಸುವುದು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು.
26.	ಸರ್ಕಾರದ ಅಧೀನ ಕಾರ್ಯದರ್ಶಿ, ಸೇವೆಗಳು–2 ಮತ್ತು ವಿಪತ್ತು ನಿರ್ವಹಣೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಪ್ರಥಮ ದರ್ಜೆ ಸಹಾಯಕರು/ ರಾಜಸ್ವ ನಿರೀಕ್ಷಕರು, ಗ್ರಾಮಲೆಕ್ಕಾಧಿಕಾರಿಗಳು, ಗ್ರಾಮಸಹಾಯಕರು, ಮಾಜಿ ಶಾನುಭೋಗರುಗಳಿಗೆ ಸಂಬಂಧ ಪಟ್ಟ ಸೇವಾ ವಿಷಯಗಳು, ಇಲಾಖೆ ವಿಚಾರಣೆ , ವೃಂದ ಮತ್ತು ನೇಮಕಾತಿ ನಿಯಮಗಳು, ಕಛೇರಿಗಳು ಮತ್ತು ಹುದ್ದೆಗಳ ಸೃಜನೆ, ಮುಂದುವರಿಕೆ ಮತ್ತು ರದ್ದುಪಡಿಸುವಿಕೆ, ನಿವೃತ್ತಿ ವೇತನ ಪ್ರಕರಣಗಳು ಹಾಗೂ ವಿಪತ್ತು ನಿರ್ವಹಣೆ ಶಾಖೆಗೆ ಸಂಬಂಧಿಸಿದ ವಿಷಯಗಳು
27.	ಶಾಖಾಧಿಕಾರಿ ಸೇವೆಗಳು–2 ಶಾಖೆ, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ)ಕಿರಿಯ ಸಹಾಯಕರು ಉ) ದಲಾಯತ್	ಪ್ರಥಮ ದರ್ಜೆ ಸಹಾಯಕರು/ ರಾಜಸ್ವ ನಿರೀಕ್ಷಕರು, ಗ್ರಾಮಲೆಕ್ಕಾಧಿಕಾರಿಗಳು, ಗ್ರಾಮ ಸಹಾಯಕರು, ಮಾಜಿ ಶಾನು ಭೋಗರುಗಳಿಗೆ ಸಂಬಂಧಪಟ್ಟ ಸೇವಾ ವಿಷಯಗಳು, ಇಲಾಖೆ ವಿಚಾರಣೆ, ವೃಂದ ಮತ್ತು ನೇಮಕಾತಿ ನಿಯಮಗಳು, ಕಛೇರಿಗಳು ಮತ್ತುಹುದ್ದೆಗಳ ಸೃಜನೆ, ಮುಂದುವರಿಕೆ ಮತ್ತು ರದ್ದುಪಡಿಸುವಿಕೆ, ನಿವೃತ್ತಿ ವೇತನ ಪ್ರಕರಣಗಳು. **ಅ) ಹಿರಿಯ ಸಹಾಯಕರು:** ಪ್ರಥಮ ದರ್ಜೆ ಸಹಾಯಕರು/ ರಾಜಸ್ವ ನಿರೀಕ್ಷಕರುಗಳಿಗೆ ಸಂಬಂಧಪಟ್ಟ ಇಲಾಖಾ ವಿಚಾರಣೆ , ಸೇವಾ ವಿಷಯಗಳು, ನಿವೃತ್ತಿ ವೇತನ ಪ್ರಕರಣಗಳು, ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗಳಿಗೆ ಸಂಬಂಧಪಟ್ಟ ವಿಷಯಗಳನ್ನು ನಿರ್ವಹಿಸುವರು. **ಆ) ಸಹಾಯಕರು–1:** ಗ್ರಾಮಲೆಕ್ಕಿಗರು, (ಮೈಸೂರು ಮತ್ತು ಬೆಳಗಾವಿ ವಿಭಾಗ) ಗ್ರಾಮಸಹಾಯಕರುಗಳಿಗೆ, ಸಂಬಂಧಪಟ್ಟ ಸೇವಾ ವಿಷಯಗಳು, ಇಲಾಖಾ ವಿಚಾರಣೆ, ನಿವೃತ್ತಿ ವೇತನ ಪ್ರಕರಣ, ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ, ಹುದ್ದೆಗಳನ್ನು ಸೃಜಿಸುವುದು ಹಾಗೂ ರದ್ದುಪಡಿಸುವುದು ಮತ್ತು ಸಮನ್ವಯ ಶಾಖೆಗೆ ಸಂಬಂಧಪಟ್ಟ ವಿಷಯಗಳನ್ನು ನಿರ್ವಹಿಸುವರು. **ಇ) ಸಹಾಯಕರು–2** ಗ್ರಾಮಲೆಕ್ಕಿಗರು, (ಬೆಂಗಳೂರು ಮತ್ತು ಗುಲ್ಬರ್ಗಾ ವಿಭಾಗ) ಮಾಜಿ ಶಾನುಭೋಗರುಗಳಿಗೆ, ಸಂಬಂಧಪಟ್ಟ ಸೇವಾ ವಿಷಯಗಳು, ಇಲಾಖಾ ವಿಚಾರಣೆ, ನಿವೃತ್ತಿ ವೇತನ ಪ್ರಕರಣ, ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗಳಿಗೆ ಸಂಬಂಧಪಟ್ಟ ವಿಷಯಗಳನ್ನು ನಿರ್ವಹಿಸುವರು.

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		ಈ) ಕಿರಿಯ ಸಹಾಯಕರು: ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
28.	ಸರ್ಕಾರದ ಅಧೀನ ಕಾರ್ಯದರ್ಶಿ, ಸೇವೆಗಳು-3, 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560 001	ತಹಶೀಲ್ದಾರ ವೃಂದದ ಅಧಿಕಾರಗಳ ಎಲ್ಲಾ ಸೇವಾ ವಿಷಯಗಳು ಇಲಾಖಾ ವಿಚಾರಣೆ ವಿಷಯಗಳು ಮತ್ತು ವರ್ಗಾವಣೆ ಪ್ರಸ್ತಾವನೆಗಳು,
29.	ಶಾಖಾಧಿಕಾರಿ ಸೇವೆಗಳು-3, 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560 001 ಅ) ಹಿರಿಯ ಸಹಾಯಕರು ಆ) ಸಹಾಯಕರು-1 ಇ) ಸಹಾಯಕರು-2 ಈ) ಕಿರಿಯ ಸಹಾಯಕರು ಉ) ದಲಾಯತ್	ತಹಶೀಲ್ದಾರ ವೃಂದದ ಅಧಿಕಾರಗಳ ಎಲ್ಲಾ ಸೇವಾ ವಿಷಯಗಳು, ಇಲಾಖಾ ವಿಚಾರಣೆ ವಿಷಯಗಳು ಮತ್ತು ವರ್ಗಾವಣೆ ಪ್ರಸ್ತಾವನೆಗಳು, **ಅ) ಹಿರಿಯ ಸಹಾಯಕರು:** ಈ ಕೆಳಗಿನ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಹಶೀಲ್ದಾರರುಗಳ ಸೇವಾ ವಿಷಯಗಳು. 1. ಬೆಂಗಳೂರು (ನಗರ) ಜಿಲ್ಲೆ. 2. ಬೆಂಗಳೂರು ಗ್ರಾಮಾಂತರ ಜಿಲ್ಲೆ. 3. ಬಳ್ಳಾರಿ ಜಿಲ್ಲೆ. 4. ಬೀದರ್ ಜಿಲ್ಲೆ. 5. ಬಾಗಲಕೋಟೆ ಜಿಲ್ಲೆ. 6. ಬೆಳಗಾವಿ ಜಿಲ್ಲೆ. 7. ಚಿತ್ರದುರ್ಗ ಜಿಲ್ಲೆ. 8. ಚಿಕ್ಕಮಗಳೂರು ಜಿಲ್ಲೆ. 9. ಚಿಕ್ಕಬಳ್ಳಾಪುರ ಜಿಲ್ಲೆ. ಶಿರಸ್ತೇದಾರರಿಂದ ತಹಶೀಲ್ದಾರ್ ಹುದ್ದೆಗೆ ಮುಂಬಡ್ತಿ ನೀಡುವುದು, ತಹಶೀಲ್ದಾರ್ ಗ್ರೇಡ್-1 ವೃಂದದಿಂದ ಕೆ.ಎ.ಎಸ್., (ಕಿರಿಯಶ್ರೇಣಿ) ವೃಂದಕ್ಕೆ ಮುಂಬಡ್ತಿ ನೀಡುವುದು, ತಹಶೀಲ್ದಾರರ ಜೇಷ್ಠತಾ ಪಟ್ಟಿ ತಯಾರಿಸುವುದು. ದೂರು, ವರ್ಗಾವಣೆ, ಇಲಾಖಾ ವಿಚಾರಣೆ, ಸ್ಥಗಿತ ವೇತನ ಬಡ್ತಿ, ಕಡ್ಡಾಯ ನಿರೀಕ್ಷಣಾ ಅವಧಿ, ರಜಾ ಪ್ರಸ್ತಾವನೆಗಳು. ವಾರ್ಷಿಕ ಆಸ್ತಿ ಹೊಣೆಗಾರಿಕಾ ಪಟ್ಟಿ ಪರಿಶೀಲಿಸುವುದು. **ಆ) ಸಹಾಯಕರು-1:** ಈ ಕೆಳಗಿನ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುವ ತಹಶೀಲ್ದಾರರುಗಳ ಸೇವಾ ವಿಷಯಗಳ ನಿರ್ವಹಣೆ: 1. ಚಾಮರಾಜನಗರ ಜಿಲ್ಲೆ. 2. ದಕ್ಷಿಣ ಕನ್ನಡ ಜಿಲ್ಲೆ. 3. ದಾವಣಗೆರೆ ಜಿಲ್ಲೆ 4. ಧಾರವಾಡ ಜಿಲ್ಲೆ

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		5. ಗದಗ್ ಜಿಲ್ಲೆ 6. ಗುಲ್ಬರ್ಗಾ ಜಿಲ್ಲೆ 7. ಹಾಸನ ಜಿಲ್ಲೆ 8. ಹಾವೇರಿ ಜಿಲ್ಲೆ 9. ಕೊಡಗು ಜಿಲ್ಲೆ. 10. ರಾಮನಗರ ಜಿಲ್ಲೆ. 11. ಯಾದಗಿರಿ ಜಿಲ್ಲೆ. ದೂರು, ವರ್ಗಾವಣೆ, ಇಲಾಖಾ ವಿಚಾರಣೆ,ಸ್ಥಗಿತ ವೇತನ ಬಡ್ತಿ, ಕಡ್ಡಾಯ ನಿರೀಕ್ಷಣಾ ಅವಧಿ, ರಜಾ ಪ್ರಸ್ತಾವನೆಗಳು. ವಾರ್ಷಿಕ ಆಸ್ತಿ ಹೊಣೆಗಾರಿಕಾ ಪಟ್ಟಿ ಪರಿಶೀಲಿಸುವುದು. **ಇ) ಸಹಾಯಕರು–2** ಈ ಕೆಳಗಿನ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುವ ತಹಶೀಲ್ದಾರರುಗಳ ಸೇವಾ ವಿಷಯಗಳ ನಿರ್ವಹಣೆ: 1. ಕೋಲಾರ ಜಿಲ್ಲೆ. 2. ಕೊಪ್ಪಳ ಜಿಲ್ಲೆ. 3. ಮಂಡ್ಯ ಜಿಲ್ಲೆ. 4. ಮೈಸೂರು ಜಿಲ್ಲೆ. 5. ರಾಯಚೂರು ಜಿಲ್ಲೆ. 6. ಶಿವಮೊಗ್ಗ ಜಿಲ್ಲೆ. 7. ತುಮಕೂರು ಜಿಲ್ಲೆ 8. ಉಡುಪಿ ಜಿಲ್ಲೆ. 9. ಉತ್ತರ ಕನ್ನಡ ಜಿಲ್ಲೆ. ದೂರು, ವರ್ಗಾವಣೆ, ಇಲಾಖಾ ವಿಚಾರಣೆ,ಸ್ಥಗಿತ ವೇತನ ಬಡ್ತಿ, ಕಡ್ಡಾಯ ನಿರೀಕ್ಷಣಾ ಅವಧಿ, ರಜಾ ಪ್ರಸ್ತಾವನೆಗಳು. ವಾರ್ಷಿಕ ಆಸ್ತಿ ಹೊಣೆಗಾರಿಕಾ ಪಟ್ಟಿ ಪರಿಶೀಲಿಸುವುದು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
30.	ಸರ್ಕಾರದ ಉಪಕಾರ್ಯದರ್ಶಿ ಭೂ ಸ್ವಾಧೀನ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಭೂ ಸ್ವಾಧೀನ–1,2,3, ಶಾಖೆಗಳ ಮೇಲುಸ್ತುವಾರಿಯನ್ನು ನೋಡಿಕೊಳ್ಳುವುದು ಹಾಗೂ ಅಧೀನ ಸಿಬ್ಬಂದಿಗಳ ನಿಯಂತ್ರಣ.
31.	ಸರ್ಕಾರದ ಅಧೀನ ಕಾರ್ಯದರ್ಶಿ, ಭೂ ಸ್ವಾಧೀನ–1&3, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–560 001	ಮೈಸೂರು, ಗುಲ್ಬರ್ಗ ಮತ್ತು ಬೆಳಗಾವಿ ವಿಭಾಗಗಳ ಭೂ ಸ್ವಾಧೀನಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು.

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
32.	ಶಾಖಾಧಿಕಾರಿ ಭೂಸ್ವಾಧೀನ-1 ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560 001 ಅ) ಹಿರಿಯ ಸಹಾಯಕರು ಆ) ಸಹಾಯಕರು-1 ಇ) ಸಹಾಯಕರು-2 ಈ) ಕಿರಿಯ ಸಹಾಯಕರು ಉ) ದಲಾಯತ್	ಮೈಸೂರು, ಹಾಸನ, ಬಳ್ಳಾರಿ, ಕೊಡಗು, ಉತ್ತರ ಕನ್ನಡ, ದಕ್ಷಿಣ ಕನ್ನಡ, ಚಾಮರಾಜನಗರ, ಗದಗ, ಧಾರವಾಡ, ಹಾವೇರಿ, ಮಂಡ್ಯ, ಉಡುಪಿ, ಚಿಕ್ಕಮಗಳೂರು ಜಿಲ್ಲೆಗಳ ಭೂ ಸ್ವಾಧೀನಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು. **ಅ) ಹಿರಿಯ ಸಹಾಯಕರು:** ಮೈಸೂರು, ಮಂಡ್ಯ, ಉಡುಪಿ, ಉತ್ತರ ಕನ್ನಡ, ದಕ್ಷಿಣಕನ್ನಡ, ಚಾಮರಾಜನಗರ ಜಿಲ್ಲೆಗಳಿಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕರಣಗಳ ನಿರ್ವಹಣೆ **ಆ) ಸಹಾಯಕರು-1:** ಧಾರವಾಡ, ಹಾವೇರಿ, ಗದಗ, ಹಾಸನ ಮತು ಚಿಕ್ಕಮಗಳೂರು, ಜಿಲ್ಲೆಗಳಿಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕರಣಗಳ ನಿರ್ವಹಣೆ **ಇ) ಸಹಾಯಕರು-2** ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಭೂ ಸ್ವಾಧೀನ ಪ್ರಕರಣಗಳ ನಿರ್ವಹಣೆ **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
33.	ಪೀಠಾಧಿಕಾರಿ/ ಶಾಖಾಧಿಕಾರಿ ಭೂಸ್ವಾಧೀನ-3 ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560 001 ಅ) ಹಿರಿಯ ಸಹಾಯಕರು ಆ) ಸಹಾಯಕರು-1 ಇ) ಕಿರಿಯ ಸಹಾಯಕರು ಈ) ದಲಾಯತ್	ಬೆಳಗಾಂ, ಗುಲ್ಬರ್ಗಾ, ಯಾದಗಿರಿ, ಬಿಜಾಪುರ, ಬಾಗಲಕೋಟೆ, ಬೀದರ್, ರಾಯಚೂರು, ಕೊಪ್ಪಳ ಜಿಲ್ಲೆಗಳ ಭೂಸ್ವಾಧೀನಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು. **ಅ) ಹಿರಿಯ ಸಹಾಯಕರು:** ಗುಲ್ಬರ್ಗಾ, ಯಾದಗಿರ್, ಬಿಜಾಪುರ, ಬಾಗಲಕೋಟೆ ಜಿಲ್ಲೆಗಳ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಎಲ್ಲಾ ವಿಷಯಗಳು **ಆ) ಸಹಾಯಕರು:** ಬೆಳಗಾಂ, ಕೊಪ್ಪಳ, ರಾಯಚೂರು ಮತ್ತು ಬೀದರ್ ಜಿಲ್ಲೆಗಳ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಎಲ್ಲಾ ವಿಷಯಗಳು **ಇ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
34.	ಸರ್ಕಾರದ ಅಧೀನ ಕಾರ್ಯದರ್ಶಿ, ಭೂ ಸ್ವಾಧೀನ-2 ಮತ್ತು ಪುನರ್ವಸತಿ, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು-560 001	**ಭೂಸ್ವಾಧೀನ** 1) ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ ಜಿಲ್ಲೆಗಳ ಭೂಸ್ವಾಧೀನಕ್ಕೆ ಸಂಬಂಧಪಟ್ಟ ಎಲ್ಲಾ ವಿಷಯಗಳು. 2) ಈ ಹಿಂದಿನ ಖಾಸಗಿ ಗೃಹ ನಿರ್ಮಾಣ ಸಹಕಾರ ಸಂಘಗಳಿಗೆ ಸಂಬಂಧಿಸಿದ ಭೂಸ್ವಾಧೀನಕ್ಕೆ ಸಂಬಂಧಪಟ್ಟ ವಿಷಯಗಳು.

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		ಪುನರ್ವಸತಿ 1) ನೀರಾವರಿ ಯೋಜನೆಗಳು ಹಾಗೂ ಇತರೆ ಅಭಿವೃದ್ಧಿ ಯೋಜನೆಗಳಿಂದ ಬಾಧಿತವಾಗುವ ಗ್ರಾಮಗಳನ್ನು ಸ್ಥಳಾಂತರಿಸಿ ಸಂತ್ರಸ್ಥ ಕುಟುಂಬಗಳಿಗೆ ಪುನರ್‌ನಿರ್ಮಾಣ ಮತ್ತು ಪುನರ್ವಸತಿ ಪ್ಯಾಕೇಜನ್ನು ಮಂಜೂರು ಮಾಡುವುದು. 2) ವಿಷಾಹಾರ ವಸ್ತುಗಳ ಮಾರಾಟ ಮತ್ತು ದಾಸ್ತಾನಿಗೆ ವಿಷಾಹಾರ ಕಾಯ್ದೆ 1919 (ಕೇಂದ್ರ ಕಾಯ್ದೆ 12) ಹಾಗೂ ಕರ್ನಾಟಕ ವಿಷಾಹಾರ ನಿಯಮಗಳು 1966ರನ್ವಯ ಪರವಾನಗಿ ನೀಡುವುದು ಹಾಗೂ ಪರವಾನಗಿ ನವೀಕರಿಸುವುದು. 3) ಈ ಕೆಳಕಂಡ ಮಂಡಳಿ/ಪ್ರಾಧಿಕಾರಗಳ ವಿಷಯಗಳು:– (1) ಕೂಡಲ ಸಂಗಮ ಅಭಿವೃದ್ಧಿ ಮಂಡಳಿ, ಕೂಡಲ ಸಂಗಮ, ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ. (2) ಬಸವಕಲ್ಯಾಣ ಅಭಿವೃದ್ಧಿ ಮಂಡಳಿ. ಬಸವಕಲ್ಯಾಣ (3) ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ, ಕಾಗಿನೆಲೆ ಬ್ಯಾಡಗಿ ತಾಲ್ಲೂಕು, ಹಾವೇರಿ ಜಿಲ್ಲೆ. (4) ಸನ್ನತಿ ಅಭಿವೃದ್ಧಿ ಮಂಡಳಿ, ಗುಲ್ಬರ್ಗ ಜಿಲ್ಲೆ. (5) ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ, ಬೆಳಗಾವಿ ಜಿಲ್ಲೆ. (6) ಬಾಗಲಕೋಟೆ ಪಟ್ಟಣಾಭಿವೃದ್ಧಿ ಪ್ರಾಧಿಕಾರ, (4) ವಿಧಾನ ಸಭೆ/ವಿಧಾನ ಪರಿಷತ್ ವಿಷಯಗಳು. (5) ನ್ಯಾಯಾಲಯ ಮೊಕದ್ದಮೆಗಳು.
35.	**ಶಾಖಾಧಿಕಾರಿ** **ಭೂಸ್ವಾಧೀನ–2** **5ನೇ ಮಹಡಿ, ಬಹುಮಹಡಿ ಕಟ್ಟಡ** **ಬೆಂಗಳೂರು–560 001** ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ ಜಿಲ್ಲೆಗಳಲ್ಲಿನ ಭೂಸ್ವಾಧೀನಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು. ಈ ಹಿಂದಿನ ಖಾಸಗಿ ಗೃಹ ನಿರ್ಮಾಣ ಸಹಕಾರ ಸಂಘಗಳಿಗೆ ಸಂಬಂಧಿಸಿದ ಭೂಸ್ವಾಧೀನ ವಿಷಯಗಳು. **ಅ) ಹಿರಿಯ ಸಹಾಯಕರು:** ಬೆಂಗಳೂರು ನಗರ, ರಾಮನಗರ, ತುಮಕೂರು, ಜಿಲ್ಲೆಗಳ ಭೂಸ್ವಾಧೀನಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು, ಬಿ.ಬಿ.ಎಂ.ಪಿ. ಮತ್ತು ಕೆ.ಹೆಚ್.ಬಿ.ಗೆ ಸಂಬಂಧಿಸಿದ ಎಲ್ಲಾ ಭೂಸ್ವಾಧೀನ ಪ್ರಕರಣಗಳು ಹಾಗೂ ಈ ಹಿಂದಿನ ಖಾಸಗಿ ಗೃಹ ನಿರ್ಮಾಣ ಸಹಕಾರ ಸಂಘಗಳಿಗೆ ಭೂಸ್ವಾಧೀನಪಡಿಸಿದ ಎಲ್ಲಾ ವಿಷಯಗಳ ನಿರ್ವಹಣೆ. **ಆ) ಸಹಾಯಕರು–1:** ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ, ಜಿಲ್ಲೆಗಳ ಭೂಸ್ವಾಧೀನಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು. **ಇ) ಸಹಾಯಕರು–2** ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ ಜಿಲ್ಲೆಗಳ ಭೂಸ್ವಾಧೀನಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳು.

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		ಈ) ಕಿರಿಯ ಸಹಾಯಕರು: ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
36.	ಸರ್ಕಾರದ ಉಪ ಕಾರ್ಯದರ್ಶಿ, ಭೂ ಮಾಪನ & ಭೂ ದಾಖಲೆಗಳು ಮತ್ತು ಪುನರ್ವಸತಿ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560 001	ಪುನರ್ವಸತಿ ಹಾಗೂ ಭೂಮಾಪನ ಮತ್ತು ಭೂದಾಖಲೆಗಳ ಇಲಾಖೆಗೆ ಸಂಬಂಧಿಸಿದಂತೆ ಎಲ್ಲಾ ವಿಷಯಗಳು ಹಾಗೂ ಜಿಲ್ಲೆ, ತಾಲ್ಲೂಕು, ಗ್ರಾಮಗಳ ಪುನರ್‌ರಚನೆ ಹಾಗೂ ಇವುಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು. ಅಧೀನ ಸಿಬ್ಬಂದಿಗಳ ನಿಯಂತ್ರಣ.
37.	ಸರ್ಕಾರದ ಅಧೀನ ಕಾರ್ಯದರ್ಶಿ, ಭೂ ಮಾಪನ & ಭೂ ದಾಖಲೆಗಳು 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560 001	ಭೂಮಾಪನ ಮತ್ತು ಭೂದಾಖಲೆಗಳ ಇಲಾಖೆಗೆ ಸಂಬಂಧಿಸಿದಂತೆ ಎಲ್ಲಾ ವಿಷಯಗಳು ಹಾಗೂ ಜಿಲ್ಲೆ, ತಾಲ್ಲೂಕು, ಗ್ರಾಮಗಳ ಪುನರ್‌ರಚನೆ ಹಾಗೂ ಇವುಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು. ಅಧೀನ ಸಿಬ್ಬಂದಿಗಳ ನಿಯಂತ್ರಣ.
38.	ಶಾಖಾಧಿಕಾರಿ ಭೂಮಾಪನಾ ಮತ್ತು ಭೂದಾಖಲೆಗಳ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560 001 ಅ) ಹಿರಿಯ ಸಹಾಯಕರು ಆ) ಸಹಾಯಕರು-1 ಇ) ಸಹಾಯಕರು-2 ಈ) ಕಿರಿಯ ಸಹಾಯಕರು ಉ) ದಲಾಯತ್	ಭೂಮಾಪನ ಮತ್ತು ಭೂದಾಖಲೆಗಳ ಇಲಾಖೆಗೆ ಸಂಬಂಧಿಸಿದಂತೆ ಎಲ್ಲಾ ವಿಷಯಗಳು ಹಾಗೂ ಜಿಲ್ಲೆ, ತಾಲ್ಲೂಕು, ಗ್ರಾಮಗಳ ಪುನರ್‌ರಚನೆ ಹಾಗೂ ಇವುಗಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳು **ಅ) ಹಿರಿಯ ಸಹಾಯಕರು:** ಭೂಮಾಪನ ಇಲಾಖೆಯ ಯೋಜನೆ, ತಾಂತ್ರಿಕ ಮಂಜೂರಾತಿಗೆ ಸಂಬಂಧಪಟ್ಟ ವಿಷಯಗಳು, ಅಳತೆ, ಹದ್ದುಬಸ್ತು ಮತ್ತು 11ಇ ನಕ್ಷೆ ವಿಷಯಕ್ಕೆ ಸಂಬಂಧಿಸಿದಂತೆ ಕಾಯ್ದೆ ಮತ್ತು ನಿಯಮಗಳ ನಿರ್ವಹಣೆ, ಗ್ರೂಪ್ ಎ ವೃಂದದ ಅಧಿಕಾರಿಗಳ ಸೇವಾ ವಿಷಯಗಳು, ಗ್ರೂಪ್ ಸಿ ಲಿಪಿಕ ನೌಕರರ ಸೇವಾ ವಿಷಯಗಳು, ವೃಂದ ಮತ್ತು ನೇಮಕಾತಿಗೆ ಸಂಬಂಧಿಸಿದ ವಿಷಯಗಳು, ಪರವಾನಗಿ ಭೂಮಾಪಕರ ವಿಷಯಗಳು, ಕಛೇರಿ/ ಹುದ್ದೆಗಳ ಮುಂದುವರಿಕೆ ವಿಷಯಗಳು. **ಆ) ಸಹಾಯಕರು-1:** ರಾಜ್ಯದ ಜಿಲ್ಲೆ, ತಾಲ್ಲೂಕು, ಕಂದಾಯ ಗ್ರಾಮಗಳ ಪುನರ್ ರಚನೆ ವಿಷಯಗಳು - ಭೂಮಾಪನ ಇಲಾಖೆಯ ಗ್ರೂಪ್ ಬಿ ಮತ್ತು ಸಿ ವೃಂದದ ಸೇವಾ ವಿಷಯಗಳು. **ಇ) ಸಹಾಯಕರು-2** ಭೂಮಾಪನ ಇಲಾಖೆ ಗ್ರೂಪ್ ಎ ವೃಂದದ ಅಧಿಕಾರಿಗಳ ಆಸ್ತಿ ಮತ್ತು ಹೊಣೆಗಾರಿಕೆ ವಿಷಯಗಳು, ಗ್ರೂಪ್ ಡಿ ವೃಂದದ ಸೇವಾ ವಿಷಯಗಳು, ಭೂಮಾಪನ ಇಲಾಖೆಯಲ್ಲಿ ಅಳತೆ / ಹದ್ದುಬಸ್ತು ವಿಷಯಗಳು **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು

ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
39.	ಶಾಖಾಧಿಕಾರಿ ಪುನರ್ವಸತಿ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ನೀರಾವರಿ ಯೋಜನೆಗಳು ಹಾಗೂ ಇತರೆ ಅಭಿವೃದ್ಧಿ ಯೋಜನೆಗಳಿಂದ ಬಾಧಿತವಾಗುವ ಗ್ರಾಮಗಳನ್ನು ಸ್ಥಳಾಂತರಿಸಿ ಸಂತ್ರಸ್ಥ ಕುಟುಂಬಗಳಿಗೆ ಪುನರ್‌ನಿರ್ಮಾಣ ಮತ್ತು ಪುನರ್ವಸತಿ ಪ್ಯಾಕೇಜನ್ನು ಮಂಜೂರು ಮಾಡುವುದು. 2) ವಿಷಾಹಾರ ವಸ್ತುಗಳ ಮಾರಾಟ ಮತ್ತು ದಾಸ್ತಾನಿಗೆ ವಿಷಾಹಾರ ಕಾಯ್ದೆ 1919(ಕೇಂದ್ರ ಕಾಯ್ದೆ 12) ಹಾಗೂ ಕರ್ನಾಟಕ ವಿಷಾಹಾರ ನಿಯಮಗಳು 1966ರನ್ವಯ ಪರವಾನಗಿ ನೀಡುವುದು ಹಾಗೂ ಪರವಾನಗಿ ನಪೀಕರಿಸುವುದು. (3) ಈ ಕೆಳಕಂಡ ಮಂಡಳಿ/ಪ್ರಾಧಿಕಾರಗಳ ವಿಷಯಗಳು. (1) ಕೂಡಲ ಸಂಗಮ ಅಭಿವೃದ್ಧಿ ಮಂಡಳಿ, ಕೂಡಲ ಸಂಗಮ ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ. (2) ಬಸವಕಲ್ಯಾಣ ಅಭಿವೃದ್ಧಿ ಮಂಡಳಿ. ಬಸವಕಲ್ಯಾಣ (3) ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ, ಕಾಗಿನೆಲೆ ಬ್ಯಾಡಗಿ ತಾಲ್ಲೂಕು, ಹಾವೇರಿ ಜಿಲ್ಲೆ. (4) ಸನ್ನತಿ ಅಭಿವೃದ್ಧಿ ಮಂಡಳಿ, ಗುಲ್ಬರ್ಗ ಜಿಲ್ಲೆ. (5) ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ, ಬೆಳಗಾವಿ ಜಿಲ್ಲೆ. (6) ಬಾಗಲಕೋಟೆ ಪಟ್ಟಣಾಭಿವೃದ್ಧಿ ಪ್ರಾಧಿಕಾರ, (7) ವಿಧಾನ ಸಭೆ / ವಿಧಾನ ಪರಿಷತ್ ವಿಷಯಗಳು. (8) ನ್ಯಾಯಾಲಯ ಮೊಕದ್ದಮೆಗಳು. **ಅ) ಹಿರಿಯ ಸಹಾಯಕರು:** ನೀರಾವರಿ ಯೋಜನೆಗಳು ಹಾಗೂ ಇತರೆ ಅಭಿವೃದ್ಧಿ ಯೋಜನೆಗಳಿಂದ ಬಾಧಿತವಾಗುವ ಗ್ರಾಮಗಳನ್ನು ಸ್ಥಳಾಂತರಿಸಿ ಸಂತ್ರಸ್ಥ ಕುಟುಂಬಗಳಿಗೆ ಪುನರ್‌ನಿರ್ಮಾಣ ಮತ್ತು ಪುನರ್ವಸತಿ ಫ್ಯಾಕೇಜನ್ನು ಮಂಜೂರು ಮಾಡುವುದು. ವಿಧಾನ ಸಭೆ ವಿಷಯಗಳು. ನ್ಯಾಯಾಲಯ ಮೊಕದ್ದಮೆಗಳು. **ಆ) ಸಹಾಯಕರು–1:** ವಿಷಾಹಾರ ವಸ್ತುಗಳ ಮಾರಾಟ ಮತ್ತು ದಾಸ್ತಾನಿಗೆ ವಿಷಾಹಾರ ಕಾಯ್ದೆ 1919(ಕೇಂದ್ರ ಕಾಯ್ದೆ 12) ಹಾಗೂ ಕರ್ನಾಟಕ ವಿಷಾಹಾರ ನಿಯಮಗಳು 1966ರನ್ವಯ ಪರವಾನಗಿ ನೀಡುವುದು ಹಾಗೂ ಪರವಾನಗಿ ನವೀಕರಿಸುವುದು. **ಇ) ಸಹಾಯಕರು–2** ಈ ಕೆಳಕಂಡ ಮಂಡಳಿ/ಪ್ರಾಧಿಕಾರಗಳ ವಿಷಯಗಳು. ಕೂಡಲ ಸಂಗಮ ಅಭಿವೃದ್ಧಿ ಮಂಡಳಿ, ಕೂಡಲ ಸಂಗಮ ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ. ಬಸವಕಲ್ಯಾಣ ಅಭಿವೃದ್ಧಿ ಮಂಡಳಿ. ಬಸವಕಲ್ಯಾಣ, ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ, ಕಾಗಿನೆಲೆ ಬ್ಯಾಡಗಿ ತಾಲ್ಲೂಕು, ಹಾವೇರಿ ಜಿಲ್ಲೆ, ಸನ್ನತಿ ಅಭಿವೃದ್ಧಿ ಮಂಡಳಿ, ಗುಲ್ಬರ್ಗಜಿಲ್ಲೆ, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ, ಬೆಳಗಾವಿ ಜಿಲ್ಲೆ, ಬಾಗಲಕೋಟೆ ಪಟ್ಟಣಾಭಿವೃದ್ಧಿ ಪ್ರಾಧಿಕಾರ, ಬಾಗಲಕೋಟೆ.ವಿಧಾನ ಪರಿಷತ್ ವಿಷಯಗಳು **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
40.	ಸರ್ಕಾರದ ಉಪ ಕಾರ್ಯದರ್ಶಿ (ವಿಪತ್ತು ನಿರ್ವಹಣೆ) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560 001	ಕಂದಾಯ ಇಲಾಖೆಯ ವಿಪತ್ತು ನಿರ್ವಹಣೆ ಶಾಖೆಯ ನಿರ್ವಹಿಸುವ ವಿಷಯಗಳ ಮೇಲ್ವಿಚಾರಣೆ ಹಾಗೂ ಅಧೀನ ಸಿಬ್ಬಂದಿಗಳ ನಿಯಂತ್ರಣ ಇಲಾಖೆಗಳಲ್ಲಿನ ಸಮನ್ವಯ ಹಾಗೂ ಸಂಘಟನಾ ಮತ್ತು ವಿಧಾನಾಧಿಕಾರಿಯಾಗಿ ಕಾರ್ಯನಿರ್ವಹಿಸುವುದು.
41.	ಕಾನೂನು ಕೋಶದ ಮುಖ್ಯಸ್ಥರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ 6ನೇ ಮಹಡಿ, 1ನೇ ಹಂತ, ಬಹುಮಹಡಿಕಟ್ಟಡ, ಬೆಂಗಳೂರು	ಕಂದಾಯ ಇಲಾಖೆಗೆ ಸಂಬಂಧಿಸಿದ ನ್ಯಾಯಾಲಯ ಪ್ರಕರಣಗಳಲ್ಲಿ ಸರ್ಕಾರದ ಪರ ವಾದ ಮಾಡಲು ಸರ್ಕಾರಿ ವಕೀಲರನ್ನು ನೇಮಿಸುವುದು. ನ್ಯಾಯಾಲಯದ ಆದೇಶಗಳನ್ನು ಪರಿಶೀಲಿಸಿ ಅಭಿಪ್ರಾಯ ನೀಡುವುದು, ಸರ್ಕಾರಿ ವಕೀಲರ ಸಂಭಾವನೆ ಬಿಲ್ಲುಗಳ ಬಗ್ಗೆ ಕ್ರಮ.
42.	ಸರ್ಕಾರದ ಅಧೀನ ಕಾರ್ಯದರ್ಶಿ, ಕಾನೂನು ಕೋಶ, 6ನೇ ಮಹಡಿ, 1ನೇ ಹಂತ, ಬಹುಮಹಡಿ ಕಟ್ಟಡ ಬೆಂಗಳೂರು-560 001 ಅ) ಹಿರಿಯ ಸಹಾಯಕರು ಆ) ಸಹಾಯಕರು-1 ಇ) ಕಿರಿಯ ಸಹಾಯಕರು ಈ) ದಲಾಯತ್	ಕಂದಾಯ ಇಲಾಖೆಗೆ ಸಂಬಂಧಿಸಿದ ನ್ಯಾಯಾಲಯ ಪ್ರಕರಣಗಳಲ್ಲಿ ಸರ್ಕಾರದ ಪರ ವಾದ ಮಾಡಲು ಸರ್ಕಾರಿ ವಕೀಲರನ್ನು ನೇಮಿಸುವುದು. ನ್ಯಾಯಾಲಯದ ಆದೇಶಗಳನ್ನು ಪರಿಶೀಲಿಸಿ ಅಭಿಪ್ರಾಯ ನೀಡುವುದು, ಸರ್ಕಾರಿ ವಕೀಲರ ಸಂಭಾವನೆ ಬಿಲ್ಲುಗಳ ಬಗ್ಗೆ ಕ್ರಮ. **ಅ) ಹಿರಿಯ ಸಹಾಯಕರು:** ಬೆಂಗಳೂರು, ಗುಲ್ಬರ್ಗಾ ವಿಭಾಗಕ್ಕೆ ಸಂಬಂಧಪಟ್ಟ ನ್ಯಾಯಾಲಯ ಪ್ರಕರಣಗಳ ನಿರ್ವಹಣೆ. **ಆ) ಸಹಾಯಕರು** ಮೈಸೂರು ಹಾಗೂ ಬೆಳಗಾಂ ವಿಭಾಗಕ್ಕೆ ಸಂಬಂಧಪಟ್ಟ ನ್ಯಾಯಾಲಯ ಪ್ರಕರಣಗಳ ನಿರ್ವಹಣೆ. **ಇ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು.
43.	ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದ ನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ 2ನೇ ಮಹಡಿ, 2ನೇ ಹಂತ, ಬಹುಮಹಡಿ ಕಟ್ಟಡ,ಬೆಂಗಳೂರು-560 001	ಕಂದಾಯ ಇಲಾಖೆ ಹಾಗೂ ಯುವಜನ ಸೇವಾ ಮತ್ತು ಕ್ರೀಡೆಗಳ ಇಲಾಖೆಯ ವಾರ್ಷಿಕ ಆಯವ್ಯಯ ತಯಾರಿಕೆ, ಅನುದಾನ ಮಂಜೂರಾತಿ ಕುರಿತು ಅಭಿಪ್ರಾಯ, ಲೆಕ್ಕಗಳ ಮರುಹೊಂದಾಣಿಕೆ, ಹಣಕಾಸು ಆಯೋಗಗಳ ಪತ್ರ ನಿರ್ವಹಣೆ ಹಾಗೂ ಇನ್ನಿತರ ಆರ್ಥಿಕ ವಿಷಯಗಳು.
44.	ಶಾಖಾಧಿಕಾರಿ (ಅಭಿಪ್ರಾಯ) 2ನೇ ಮಹಡಿ, 2ನೇ ಹಂತ, ಬಹುಮಹಡಿ ಕಟ್ಟಡ ಬೆಂಗಳೂರು-560 001 ಅ) ಹಿರಿಯ ಸಹಾಯಕರು ಆ) ಸಹಾಯಕರು-1 ಇ) ಸಹಾಯಕರು-2	ಕಂದಾಯ ಇಲಾಖೆಯ ಸೇವಾ ವಿಷಯಗಳು, ಹಣಬಿಡುಗಡೆ, ಮರುಹೊಂದಾಣಿಕೆ ಬಗ್ಗೆ ಅಭಿಪ್ರಾಯ ನೀಡುವಿಕೆ. **ಅ) ಹಿರಿಯ ಸಹಾಯಕರು:** ಕಂದಾಯ ಇಲಾಖೆಯ ಸೇವಾ ವಿಷಯಗಳು, ಹಣಬಿಡುಗಡೆ, ಮರುಹೊಂದಾಣಿಕೆ ಬಗ್ಗೆ ಅಭಿಪ್ರಾಯ ನೀಡುವಿಕೆ. **ಆ) ಸಹಾಯಕರು-1:** ಕಂದಾಯ ಇಲಾಖೆಯ ಸೇವಾ ವಿಷಯಗಳು, ಹಣಬಿಡುಗಡೆ, ಮರುಹೊಂದಾಣಿಕೆ ಬಗ್ಗೆ ಅಭಿಪ್ರಾಯ ನೀಡುವಿಕೆ.

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
	ಈ) ಕಿರಿಯ ಸಹಾಯಕರು ಉ) ದಲಾಯತ್	**ಇ) ಸಹಾಯಕರು–2** ಯುವಜನ ಸೇವಾ ಮತ್ತು ಕ್ರೀಡೆಗಳ ಇಲಾಖೆಯ ಸೇವಾ ವಿಷಯಗಳು, ಹಣಬಿಡುಗಡೆ, ಮರುಹೊಂದಾಣಿಕೆ ಬಗ್ಗೆ ಅಭಿಪ್ರಾಯ ನೀಡುಪಿಕೆ. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
